ಸಂಪುಟ: 02/ ಸಂಚಿಕೆ: ೧೧೭/ಶನಿವಾರ ದಿನಾಂಕ : ೨೧-೦೬-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

■ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ಗದಗ ■ಕೊಪ್ಪಳ ■ಹಾವೇರಿ ■ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 117/ SATURDAY Date : 21-06-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

ಎತ್ತಿನಹೊಳೆ ಯೋಜನೆ 2027ರ ಮಾರ್ಚ್ ಒಳಗಾಗಿ ಪೂರ್ಣಗೊಳಿಸುವಂತೆ ಮುಖ್ಯಮಂತ್ರಿ ಸೂಚನೆ

ಬೆಂಗಳೂರು: ಎತ್ತಿನಹೊಳೆ ಯೋಜನೆಯನ್ನು 2027ರ ಮಾರ್ಚ್ ಒಳಗಾಗಿ ಪೂರ್ಣಗೊಳಿಸುವಂತೆ ಸಿಎಂ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ.

ಅಧಿಕೃತ ನಿವಾಸ ಕಾವೇರಿಯಲ್ಲಿ ಶುಕ್ರವಾರ ನಡೆಸಿದ ಎತ್ತಿನಹೊಳೆ ಯೋಜನೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು, ಎತ್ತಿನಹೊಳೆ ನೀರಾವರಿ ಯೋಜನೆಯಲ್ಲ. ಕುಡಿಯುವ ನೀರಿನ ಮತ್ತು ಕೆರೆ ತುಂಬಿಸುವ ಯೋಜನೆಯಾಗಿದೆ. ಯೋಜನಾ ವ್ಯಾಪ್ತಿಯ ಎಲ್ಲ 7 ಜಿಲ್ಲೆಗಳಿಗೆ ಕುಡಿಯುವ ನೀರು ಒದಗಿಸುವುದು ಸರ್ಕಾರದ ಗುರಿ. ಎತ್ತಿನಹೊಳೆ ಯೋಜನೆಯನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವುದು ಸರ್ಕಾರದ ಆದ್ಯತೆಯಾಗಿದೆ ಎಂದರು.

ಕುಡಿಯುವ ನೀರಿನ ಪೂರೈಕೆಗೆ ಬೇಕಾದಷ್ಟು ನೀರು ಸರಾಸರಿ ಲಭ್ಯವಿದೆ. ಪ್ರಾರಂಭಿಕ ಹಂತದಲ್ಲಿ ಕುಡಿಯುವ ನೀರಿನ ಕಾಮಗಾರಿಗಳನ್ನು ಪೂರ್ಣಗೊಳಿಸಿ ಬಳಿಕ ಕೆರೆಗಳನ್ನು ತುಂಬಿಸುವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಬೇಕು. ಯೋಜನಾ ವ್ಯಾಪ್ತಿಯ ಎಲ್ಲ ಜಿಲ್ಲೆಗಳಲ್ಲಿ ಕುಡಿಯುವ ನೀರಿಗೆ ಯಾವುದೇ ತೊಂದರೆಯಾಗದಂತೆ ಖಾತ್ರಿಪಡಿಸಬೇಕು. ಕುಡಿಯುವ ನೀರು ಕಾಮಗಾರಿ ಪೂರ್ಣಗೊಳಿಸಲು ಇರುವ ಎಲ್ಲಾ ತಾಂತ್ರಿಕ ಅಡಚಣೆಗಳನ್ನು ನಿವಾರಿಸಬೇಕು ಎಂದು ಸೂಚನೆ ನೀಡಿದರು.

ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯಡಿ 14.056 ಟಿಎಂಸಿ ಕುಡಿಯುವ ನೀರು, 9.953 ಟಿಎಂಸಿ ನೀರು ಕೆರೆಯನ್ನು ತುಂಬಿಸಲು ಡಿಪಿಆರ್ ಮಾಡಲಾಗಿದೆ. ಯೋಜನೆಗೆ 23,251.66 ಕೋಟಿ ರೂ. ಪರಿಷ್ಕೃತ ಅಂದಾಜು ಮಾಡಲಾಗಿದ್ದು, ಇದುವರೆಗೆ ರೂ.17,147 ಕೋಟಿ ವೆಚ್ಚವಾಗಿದೆ. ಒಂದನೇ ಹಂತದಲ್ಲಿ ನದಿ ಪಾತ್ರದ ಏತ ಕಾಮಗಾರಿಗಳಲ್ಲಿ 7ಪ್ಯಾಕೇಜ್ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ. ಹಂತ 2ರಲ್ಲಿ ಮುಖ್ಯ ಕಾಲುವೆ ಕಾಮಗಾರಿಗಳಲ್ಲಿ 33 ಪ್ಯಾಕೇಜ್‌ಗಳ ಪೈಕಿ 11 ಪ್ಯಾಕೇಜ್ ಪೂರ್ಣಗೊಳಿಸಲಾಗಿದೆ.

16 ಕಿಮೀ ವ್ಯಾಪ್ತಿಯ ಕಾಮಗಾರಿ ಪ್ರಾರಂಭಿಸಬೇಕಿದ್ದು, ಇದರಲ್ಲಿ 6 ಎಕರೆ ಅರಣ್ಯ ಪ್ರದೇಶ ಹಾಗೂ 10ಕಿ.ಮೀ ಭೂಸ್ವಾಧೀನ ಪ್ರಕ್ರಿಯೆ ಕೈಗೊಳ್ಳಬೇಕಾಗಿದೆ. ಯೋಜನೆಯನ್ನು 2027ರ ಮಾರ್ಚ್ ಒಳಗಾಗಿ ಪೂರ್ಣಗೊಳಿಸಲು ಕಾಲಾವಧಿ ನಿಗದಿಪಡಿಸಲಾಗಿದೆ.

ಕಳೆದ ಏಳು ವರ್ಷಗಳಲ್ಲಿ ಸರಾಸರಿ 18.08 ಟಿಎಂಸಿ ನೀರು ಯೋಜನೆಗೆ ಲಭ್ಯವಿದ್ದು, ಉಳಿದ 6 ಟಿಎಂಸಿ ನೀರಿನ ಕೊರತೆಯನ್ನು ನೀಗಿಸಲು ಹೆಚ್ಚುವರಿ ನೀರನ್ನು ತಿರುವುಗೊಳಿಸುವ **(Augmentation)** ಕುರಿತು ಕಾರ್ಯಸಾಧ್ಯತಾ ವರದಿಯನ್ನು ತಯಾರಿಸಲು ಸಮಾಲೋಚಕರನ್ನು ನೇಮಕ ಮಾಡಲಾಗಿದೆ.

***

'ಇ-ಸ್ವತ್ತು' ಜುಲೈ ಎರಡನೆ ವಾರದಲ್ಲಿ ಅಂತಿಮ ನಿಯಮಾವಳಿಗಳು ಪ್ರಕಟ: ಪ್ರಿಯಾಂಕ್ ಖರ್ಗೆ

ಬೆಂಗಳೂರು : ಗ್ರಾಮೀಣ ಪ್ರದೇಶಗಳ ಆಸ್ತಿಗಳಿಗೆ ಇ-ಸ್ವತ್ತು ವಿತರಿಸುವಲ್ಲಿ ರೂಪಿಸಲಾಗುತ್ತಿರುವ ಕರಡು ನಿಯಮಾವಳಿಗಳು ಈ ಮಾಸಾಂತ್ಯಕ್ಕೆ ಸಿದ್ಧಗೊಳ್ಳುತ್ತಿದ್ದು, ಜುಲೈ ಎರಡನೆಯ ವಾರದಲ್ಲಿ ಅಂತಿಮ ನಿಯಮಾವಳಿಗಳು ಪ್ರಕಟಗೊಳ್ಳಲಿವೆ, ಆನಂತರ ಇ?ಸ್ವತ್ತು ವಿತರಣೆ ಸಂಬಂಧಿಸಿದಂತೆ ಮಾರ್ಗಸೂಚಿಗಳನ್ನು ಹೊರಡಿಸಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಶುಕ್ರವಾರ ಈ ಸಂಬಂಧ ವಿಕಾಸಸೌಧದಲ್ಲಿರುವ ತಮ್ಮ ಕಚೇರಿಯಲ್ಲಿ ಗ್ರಾಮೀಣ ಅಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯ ಹಿರಿಯ ಅಧಿಕಾರಿಗಳ ಸಭೆ ನಡೆಸಿದ ಅವರು, ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಜನರು ಇ-ಸ್ವತ್ತು ವಿತರಣೆ ಪ್ರಕ್ರಿಯೆಯ ನಿರೀಕ್ಷೆಯಲ್ಲಿದ್ದು, ಸರಳ ಹಾಗೂ ಸುಗಮ ರೀತಿಯಲ್ಲಿ ಈ ವ್ಯವಸ್ಥೆಯನ್ನು ಜಾರಿಗೆ ತರಬೇಕೆಂದು ಸೂಚನೆ ನೀಡಿದರು.

ಇ-ಸ್ವತ್ತು ಆಸ್ತಿ ನಮೂನೆಗಳನ್ನು ವಿತರಿಸುವುದರಿಂದ ರಾಜ್ಯದ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ 1.45 ಕೋಟಿ ಆಸ್ತಿಗಳು ಇ-ಸ್ವತ್ತು ತೆಕ್ಕೆಗೆ ಬರುವ ನಿರೀಕ್ಷೆಯಿದ್ದು, ಸಾರ್ವಜನಿಕರ ಆಸ್ತಿಗಳು ಅಧಿಕೃತಗೊಳ್ಳುವುದಲ್ಲದೆ, ಗ್ರಾಮ ಪಂಚಾಯತಿಗಳ ಆದಾಯ ಹೆಚ್ಚಲಿರುವುದರಿಂದ ಗ್ರಾಮಗಳ ಅಭಿವೃದ್ಧಿ ಸಾಧ್ಯವಾಗಲಿದೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದರು.

ಸಭೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ (ಪಂಚಾಯತ್ ರಾಜ್) ಉಮಾ ಮಹದೇವನ್, ಪಂಚಾಯತ್ ರಾಜ್ ಇಲಾಖೆಯ ಆಯುಕ್ತೆ ಡಾ.ಅರುಂಧತಿ ಚಂದ್ರಶೇಖರ್ ಸೇರಿದಂತೆ ಹಿರಿಯ ಅಧಿಕಾರಿಗಳು ಪಾಲ್ಗೊಂಡಿದ್ದರು.

*****

ದ್ವೇಷ ಭಾಷಣ-ಸುಳ್ಳು ಸುದ್ದಿ ತಡೆಗೆ ಸರ್ಕಾರ ಮುಂದು ಪ್ರತ್ಯೇಕ ವಿಧೇಯಕ ಮಂಡನೆಗೆ ನಿರ್ಧಾರ..!

ಬೆಂಗಳೂರು: ರಾಜ್ಯದಲ್ಲಿ ದ್ವೇಷ ಭಾಷಣ ಹಾಗೂ ದ್ವೇಷದ ಅಪರಾಧ ತಡೆಗೆ ಪ್ರತ್ಯೇಕ ವಿಧೇಯಕ ಮಂಡನೆಗೆ ರಾಜ್ಯ ಸರ್ಕಾರ ಮುಂದಾಗಿದ್ದು, ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ 'ದ್ವೇಷ ಅಪರಾಧಗಳು ಮತ್ತು ದ್ವೇಷ (ಹೋರಾಟ, ತಡೆಯುವಿಕೆ) ವಿಧೇಯಕ– 2025' ಕರಡು ಕುರಿತು ಚರ್ಚಿಸಲಾಗಿದೆ.

ಗುರುವಾರ ನಡೆದ ಸಂಪುಟ ಸಭೆಯಲ್ಲಿ ವಿಧೇಯಕ ಕುರಿತು ಪ್ರಸ್ತಾಪಿಸಲಾಗಿದ್ದು ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ತೀರ್ಮಾನಿಸಲಾಗುವುದು ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್ಕೆ ಪಾಟೀಲ್ ಅವರು ತಿಳಿಸಿದ್ದಾರೆ.

ಕರಡು ಮಸೂದೆಯ ಪ್ರಕಾರ, ನಕಲಿ ಸುದ್ದಿಗಳಲ್ಲಿ ತಪ್ಪು ಉಲ್ಲೇಖಗಳು ಅಥವಾ ಒಬ್ಬರ ಹೇಳಿಕೆಯ ಸುಳ್ಳು ಮತ್ತು/ಅಥವಾ ತಪ್ಪಾದ ವರದಿಗಳ ಸಂಯೋಜನೆ ಸೇರಿದೆ.

ಸತ್ಯ ಮತ್ತು/ಅಥವಾ ಸಂದರ್ಭದ ವಿರೂಪಕ್ಕೆ ಕಾರಣವಾಗುವ ಆಡಿಯೋ ಅಥವಾ ವೀಡಿಯೊ ತುಣುಕುಗಳನ್ನು ಸಂಪಾದಿಸುವುದು; ಕಾನೂನುಬದ್ಧ, ಸಂಘಟಿತ ಅಥವಾ ಅಸಂಘಟಿತ, ಅದು ಸಾಮಾಜಿಕ ಮಾಧ್ಯಮ ವಿಷಯವನ್ನು ಬಳಸಿಕೊಳ್ಳುವುದು, ಸಾಮಾಜಿಕ ಮಾಧ್ಯಮ ಖಾತೆಗಳ ಮೂಲಕ, ಪರಿಶೀಲಿಸಿದ ಅಥವಾ ಗುಪ್ತನಾಮ, ಕಾಲ್ಪನಿಕ ಅಥವಾ ಸುಳ್ಳು ಖಾತೆ/ಪುಟದ ಹೆಸರಿನ ಮೂಲಕ ಸಂದೇಶಗಳು ಮತ್ತು/ಅಥವಾ ಮಾಹಿತಿಯನ್ನು ಕಳುಹಿಸುವುದು, ನಕಲಿ ಸುದ್ದಿಗಳನ್ನು ಹರಡುವುದನ್ನು ಸಂಪೂರ್ಣ ನಿಷೇಧಿಸುವುದನ್ನು ಕಾನೂನು ಖಚಿತರಡಿಸುತ್ತದೆ.

ಕಾಯ್ದೆಯನ್ನು ಜಾರಿಗೆ ತರಲು ನಕಲಿ ಸುದ್ದಿ ನಿಯಂತ್ರಣ ಪ್ರಾಧಿಕಾರವನ್ನು ರಚಿಸಲಾಗುತ್ತದೆ. ಈ ಪ್ರಾಧಿಕಾರವು ಕನ್ನಡ ಮತ್ತು ಸಂಸ್ಕೃತಿ, ಮಾಹಿತಿ ಮತ್ತು ಪ್ರಸಾರ ಸಚಿವರನ್ನು ಪದನಿಮಿತ್ತ ಅಧ್ಯಕ್ಷರನ್ನಾಗಿ; ಕರ್ನಾಟಕ ವಿಧಾನಸಭೆ ಮತ್ತು ಪರಿಷತ್ತಿನಿಂದ ತಲಾ ಒಬ್ಬ ಸದಸ್ಯರನ್ನು ಅಧ್ಯಕ್ಷರು ನಾಮನಿರ್ದೇಶನ ಮಾಡುತ್ತಾರೆ. ರಾಜ್ಯ ಸರ್ಕಾರದಿಂದ ನೇಮಕಗೊಳ್ಳುವ ಸಾಮಾಜಿಕ ಮಾಧ್ಯಮ ವೇದಿಕೆಗಳ ಇಬ್ಬರು ಪ್ರತಿನಿಧಿಗಳು ಮತ್ತು ಕಾರ್ಯದರ್ಶಿಯಾಗಿ ಒಬ್ಬ ಐಎಎಸ್ ಅಧಿಕಾರಿಯನ್ನು ಒಳಗೊಂಡಿರುತ್ತದೆ.

ವ್ಯಕ್ತಿ ನಕಲಿ ಸುದ್ದಿಗಳನ್ನು ಪೋಸ್ಟ್ ಮಾಡುವಲ್ಲಿ ತಪ್ಪಿತಸ್ಥರೆಂದು ಏಳು ವರ್ಷಗಳವರೆಗೆ ಜೈಲು ಶಿಕ್ಷೆ ಮತ್ತು 10 ಲಕ್ಷ ರೂ.ಗಳವರೆಗೆ ದಂಡ ಅಥವಾ ಎರಡನ್ನೂ ವಿಧಿಸಲಾಗುತ್ತದೆ ಎಂದು ತಿಳಿಸಲಾಗಿದೆ.

ಸಂಪುಟ ಸಭೆಯಲ್ಲಿ ಕರ್ನಾಟಕ ಆಡಳಿತ ನ್ಯಾಯಮಂಡಳಿ (ಕೆಎಟಿ) ವ್ಯವಸ್ಥೆಯ ಕಾರ್ಯನಿರ್ವಹಣೆಯ ಸ್ವರೂಪವನ್ನು ಚರ್ಚಿಸಲಾಗಿದ್ದು, ಮರುಪರಿಶೀಲಿಸಲು ಸಚಿವ ಸಂಪುಟ ನಿರ್ಧರಿಸಿದೆ. ಕೆಎಟಿಯ ಕಾರ್ಯನಿರ್ವಹಣೆಯ ಬಗ್ಗೆ ಚರ್ಚೆಗಳು ಮತ್ತು ಆಕ್ರೋಶಗಳು ವ್ಯಕ್ತವಾಗಿದ್ದು, ಈ ಹಿನ್ನೆಲೆಯಲ್ಲಿ ವ್ಯವಸ್ಥೆಯನ್ನು ಪುರನ್ ಪರಿಶೀಲಿಸಿ ಪರಿಹಾರ ಕಂಡುಕೊಳ್ಳಲು ಚಿಂತೆ ನಡೆಸಲಾಗಿದೆ ಎಂದು ಸಚಿವ ಹೆಚ್.ಕೆ.ಪಾಟೀಲ್ ಅವರು ಹೇಳಿದ್ದಾರೆ.

ಮೋದಿ ನೇತೃತ್ವದ ಸರ್ಕಾರ ಆರೋಗ್ಯ ವಲಯದ ಸಮಸ್ಯೆಗಳ ಸಮಗ್ರ ದೃಷ್ಟಿಕೋನದಿಂದ ಬಗೆಹರಿಸಿದೆ: ಅಮಿತ್ ಶಾ



ಬೆಂಗಳೂರು: ಸಾರ್ವಜನಿಕರು ಎದುರಿಸುತ್ತಿರುವ ಆರೋಗ್ಯ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಅವರ ನೇತೃತ್ವದ ಕೇಂದ್ರ ಸರ್ಕಾರವು 'ಸಮಗ್ರ' ವಿಧಾನವನ್ನು ಅನುಸರಿಸುತ್ತಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಶುಕ್ರವಾರ ಶ್ಲಾಘಿಸಿದ್ದಾರೆ.

ಆದಿಚುಂಚನಗಿರಿ ವಿಶ್ವವಿದ್ಯಾಲಯ (ಎಸಿಯು) ಬೆಂಗಳೂರು ಆವರಣವನ್ನು ಉದ್ಘಾಟಿಸಿದ ನಂತರ ಮಾತನಾಡಿದರು.

'ಬಡತನ ಎದುರಿಸುವ ದೊಡ್ಡ ಸಮಸ್ಯೆ ಎಂದರೆ ಅನಾರೋಗ್ಯ ಮತ್ತು ಚಿಕಿತ್ಸೆಯ ವೆಚ್ಚವಾಗಿದೆ; ಸರ್ಕಾರವು ಬಡವರಿಗೆ ಚಿಕಿತ್ಸೆಗೆ ವ್ಯವಸ್ಥೆ ಮಾಡಬೇಕು ಎಂದು ನಮ್ಮ ನಾಯಕರಾದ ಪ್ರಧಾನಿ ಮೋದಿ ಹಲವಾರು ವರ್ಷಗಳ ಹಿಂದೆಯೇ ಗುಜರಾತ್‌ನಲ್ಲಿ ಹೇಳಿದ್ದರು ಎಂದರು.

ಮೋದಿ ಅವರು ಪ್ರಧಾನಿಯಾದಾಗ 60 ಕೋಟಿ ಬಡವರಿಗೆ 5 ಲಕ್ಷ ರೂ.ಗಳವರೆಗೆ ಉಚಿತ ಚಿಕಿತ್ಸೆಯನ್ನು ಒದಗಿಸುವ ಮೂಲಕ ಆ ಮಾತಿನಂತೆ ನಡೆದುಕೊಂಡಿದ್ದಾರೆ ಎಂದು ನಾನು ಇಂದು ಹೆಮ್ಮೆಯಿಂದ ಹೇಳಬಲ್ಲೆ ಎಂದು ಶಾ ಹೇಳಿದರು.

ಮೋದಿ ಸರ್ಕಾರವು ಫಿಟ್ ಇಂಡಿಯಾ ಆಂದೋಲನ, ಯೋಗ ದಿನ, ಮಿಷನ್ ಇಂದ್ರಧನುಷ್ ಮತ್ತು ಪೋಷಣ ಅಭಿಯಾನ, ಆಯುಷ್ಮಾನ್ ಭಾರತ್ ಮತ್ತು ಭಾರತೀಯ ಜನೌಷಧಿ ಪರಿಯೋಜನ ಸೇರಿದಂತೆ ಸುಮಾರು 12 ಕೋಟಿ ಮನೆಗಳಲ್ಲಿ ಶೌಚಾಲಯಗಳನ್ನು ನಿರ್ಮಿಸುವಂತಹ ಕಾರ್ಯಕ್ರಮಗಳೊಂದಿಗೆ ಆರೋಗ್ಯದ ಸಮಸ್ಯೆಯನ್ನು ಸಮಗ್ರ ದೃಷ್ಟಿಕೋನದಿಂದ ಪರಿಹರಿಸಿದೆ ಎಂದು ಅವರು ಹೇಳಿದರು.

ವ್ಯಕ್ತಿಯೊಬ್ಬ ತಾಯಿಯ ಗರ್ಭಾದಲ್ಲಿರುವ ಸಮಯದಿಂದ ಪ್ರೌಢಾವಸ್ಥೆಯವರೆಗೆ ಅವರ ಜೀವನದುದ್ದಕ್ಕೂ ಬೆಂಬಲ ನೀಡುವ ಸಮಗ್ರ ಆರೋಗ್ಯ ರಕ್ಷಣಾ ವಿಧಾನವನ್ನು ಅಳವಡಿಸಿಕೊಳ್ಳಲಾಗಿದೆ. ಪ್ರತಿಯೊಂದು ಹಂತದಲ್ಲೂ ಅನಾರೋಗ್ಯವನ್ನು ತಡೆಗಟ್ಟುವುದು ಮತ್ತು ಯಾರಾದರೂ ಅನಾರೋಗ್ಯಕ್ಕೆ ಒಳಗಾಗಿದ್ದರೆ, ಆರ್ಥಿಕ ಸಂಕಷ್ಟವನ್ನು ಎದುರಿಸದೆ ಅವರು ಕೈಗೆಟುಕುವ ಚಿಕಿತ್ಸೆಯನ್ನು ಪಡೆಯುವುದನ್ನು ಖಚಿತಪಡಿಸಿಕೊಳ್ಳಲಾಗುತ್ತಿದೆ ಎಂದು ಅವರು ಹೇಳಿದರು.

ದೇಶದಲ್ಲಿ ವೈದ್ಯರ ಸಂಖ್ಯೆಯನ್ನು ಹೆಚ್ಚಿಸಲು ಪ್ರಮುಖ ಪ್ರಯತ್ನಗಳನ್ನು ಕೈಗೊಳ್ಳಲಾಗಿದೆ ಎಂದು ಶಾ ಹೇಳಿದರು. 2014 ರಲ್ಲಿ, ದೇಶದಲ್ಲಿ 7 **AIIMS** ಗಳಿದ್ದವು. ಇಂದು 23 ಖಖಖಒಖ ಗಳಿವೆ ಮತ್ತು ವೈದ್ಯಕೀಯ ಕಾಲೇಜುಗಳ ಸಂಖ್ಯೆ 387 ರಿಂದ 780 ಕ್ಕೆ ಏರಿದೆ. ಆಗ (2014) 51,000 ಒಃಖ ಸೀಟುಗಳು ಇದ್ದವು, ಇಂದು ಅದು 1,18,000 ಮತ್ತು ಸ್ನಾತಕೋತ್ತರ ಸೀಟುಗಳ ಸಂಖ್ಯೆ 31,000 ರಿಂದ 74,000 ಕ್ಕೆ ಏರಿಕೆಯಾಗಿದೆ. ಹಾಗಾಗಿ, ದೇಶದಲ್ಲಿ ಪ್ರತಿ ವರ್ಷ 1,18,000 ಎಂಬಿಬಿಎಸ್ ವೈದ್ಯರು ಮತ್ತು 74,000 ಡಬಲ್ ಪದವೀಧರ ವೈದ್ಯರು ಹೊರಬರುತ್ತಿದ್ದಾರೆ ಎಂದರು.

ಕೇಂದ್ರ ಭಾರಿ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್ ಡಿ ಕುಮಾರಸ್ವಾಮಿ ಮತ್ತು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ಏ ನೋಮಣ್ಣ ಮತ್ತು ಆದಿಚುಂಚನಗಿರಿ ಮಠದ ನಿರ್ಮಲಾನಂದನಾಥ ಮಹಾಸ್ವಾಮೀಜಿ ಇದ್ದರು.

****

ರಾಜ್ಯ ಸರ್ಕಾರದಲ್ಲಿ ಭ್ರಷ್ಟಾಚಾರ ತಾಂಡವ: ಮಾಜಿ ಮುಖ್ಯಮಂತ್ರಿ ಬಿ. ಎಸ್. ಯಡಿಯೂರಪ್ಪ ಕಿಡಿ

ಬೆಂಗಳೂರು : ರಾಜ್ಯ ಸರ್ಕಾರದಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿದೆ. ಬಹುತೇಕ ಅಭಿವೃದ್ಧಿ ಕೆಲಸಗಳು ಸ್ಥಗಿತವಾಗಿವೆ ಎಂದು ಬಿಜೆಪಿ ಕೇಂದ್ರೀಯ ಸಂಸದೀಯ ಮಂಡಳಿ ಸದಸ್ಯ ಮತ್ತು ಮಾಜಿ ಮುಖ್ಯಮಂತ್ರಿ ಬಿ. ಎಸ್. ಯಡಿಯೂರಪ್ಪ ಆರೋಪಿಸಿದ್ದಾರೆ.

ಬಿಜೆಪಿ ರಾಜ್ಯ ಕಾರ್ಯಾಲಯದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಜನರ ಸಂಕಷ್ಟಗಳನ್ನು ಯಾರೂ ಕೇಳುವವರಿಲ್ಲ ಎಂಬಂಥ ದುಃಸ್ಥಿತಿ ಬಂದಿದೆ. ಕೇವಲ ಪ್ರಚಾರದಲ್ಲಿ ಇವರು ತೊಡಗಿದ್ದು, ಅಭಿವೃದ್ಧಿ ಕಡೆ ಗಮನ ಕೊಡುತ್ತಿಲ್ಲ ಎಂದು ಕಿಡಿಕಾರಿದರು.

ನೀರಾವರಿ ಯೋಜನೆಗಳು ಸಂಪೂರ್ಣ ಸ್ಥಗಿತವಾಗಿವೆ. ಕರ್ನಾಟಕದ ಯಾವುದೇ ಮೂಲೆಯಲ್ಲಾದರೂ ಒಂದು ಕಿ. ಮೀ ರಸ್ತೆ ಆಗುತ್ತಿರುವುದನ್ನು ಈ ಸರ್ಕಾರ ತೋರಿಸಲಿ ಎಂದು ಸವಾಲು ಹಾಕಿದರು. ಈ ಸರ್ಕಾರ ತುಘಲಕ್ ದರ್ಬಾರ್ ಮಾಡುತ್ತಿದೆ ಎಂದು ಆರೋಪಿಸಿದರು.

ನಾವು ಅಲ್ಪಸಂಖ್ಯಾತರ ವಿರೋಧಿಗಳಲ್ಲ; ಆದರೆ, ಅಲ್ಪಸಂಖ್ಯಾತರಿಗೆ ಮಿತಿ ಮೀರಿ ನೆರವು ಕೊಡುವುದು ಅಕ್ಷಮ್ಯ ಅಪರಾಧ. ಪರಿಶಿಷ್ಟ ಜಾತಿ, ವರ್ಗದ ಜನರಿಗೆ ಹೆಚ್ಚು ಅನುಕೂಲ ಮಾಡಿಕೊಡಬೇಕಾದ ಈ ಸರ್ಕಾರವು ಕೇವಲ ಮತಬ್ಯಾಂಕ್ ರಾಜಕಾರಣಕ್ಕಾಗಿ ಅಲ್ಪಸಂಖ್ಯಾತರನ್ನು ತೃಪ್ತಿಪಡಿಸುವ ಕೆಲಸದಲ್ಲಿ ತೊಡಗಿದ್ದು, ಇದನ್ನು ನಾವೆಲ್ಲರೂ ಖಂಡಿಸುತ್ತೇವೆ. ಈಗಲಾದರೂ ಸರ್ಕಾರ ಜಾಗೃತವಾಗಿ ಅಭಿವೃದ್ಧಿ ಕಡೆ ಗಮನ ಕೊಡಬೇಕು. ಎಲ್ಲ ವರ್ಗದ ಜನರಿಗೆ ನ್ಯಾಯ ಒದಗಿಸಿ ಕೊಡುವ ಕೆಲಸ ಮಾಡಬೇಕೆಂದು ಒತ್ತಾಯಿಸಿದರು.

ಹಣ ಕೊಟ್ಟು ಆಶ್ರಯ ಮನೆ ಪಡೆಯಬೇಕಿದೆ ಎಂಬ ಕಾಂಗ್ರೆಸ್ ಶಾಸಕ ಬಿ. ಆರ್. ಪಾಟೀಲರ ಆಡಿಯೋ ವೈರಲ್ ಆದ ಕುರಿತ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಬಿ. ಆರ್. ಪಾಟೀಲ್ ಹೇಳಿದ್ದು ನೂರಕ್ಕೆ ನೂರು ಸತ್ಯ. ಹಣ ಕೊಡದೇ ಯಾವುದೇ ಕೆಲಸ ಆಗುವುದಿಲ್ಲ ಎಂಬುದು ಸಾಬೀತಾಗಿದೆ. ಬಡವರು ಮನೆ ಬೇಕೆಂದರೂ ದುಡ್ಡು ಕೊಟ್ಟು ತೆಗೆದುಕೊಳ್ಳಬೇಕಾಗಿದೆ. ಸರ್ಕಾರ ತಪ್ಪನ್ನು ಒಪ್ಪಿಕೊಂಡು ಅದನ್ನು ಸರಿಪಡಿಸಿ ಬಡವರಿಗೆ ನ್ಯಾಯ ಒದಗಿಸಿಕೊಡಲಿ ಎಂದು ಆಗ್ರಹಿಸಿದರು.

ಕೇಂದ್ರ ಸಚಿವ, ಜೆಡಿಎಸ್‌ನ ಹೆಚ್. ಡಿ. ಕುಮಾರಸ್ವಾಮಿ ಅವರ ಮಾತು ಎಲ್ಲರೂ ಒಟ್ಟಾಗಿ ಹೋಗುತ್ತೇವೆ ಎಂಬ ಅರ್ಥ ನೀಡುವಂತಿದೆ ಎಂದು ಪ್ರಶ್ನೆಯೊಂದಕ್ಕೆ ಉತ್ತರ ನೀಡಿದರು. ಬಿಜೆಪಿ– ಜೆಡಿಎಸ್ ಬೇರೆಯಲ್ಲ; ನಾವು ಒಟ್ಟಾಗಿ ಮುಂದುವರೆಯುತ್ತೇವೆ. ಹೆಚ್. ಡಿ. ದೇವೇಗೌಡರು ಕೂಡ ಹಲವು ಬಾರಿ ಈಗಾಗಲೇ ಪ್ರಧಾನಿ ನರೇಂದ್ರ ಮೋದಿ ಜೀ ಅವರ ಬಗ್ಗೆ ನಂಬಿಕೆ– ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಬಿಜೆಪಿ– ಜೆಡಿಎಸ್ ಮುಂದಿನ ದಿನಗಳಲ್ಲಿ ಒಟ್ಟಾಗಿ ಮುನ್ನೆಡೆದು ಹೇಗಾದರೂ ಮಾಡಿ ಸರ್ಕಾರವನ್ನು ಇಳಿಸಿ ನಮ್ಮ ಸರ್ಕಾರ ಅಧಿಕಾರಕ್ಕೆ ತರಬೇಕಿದೆ. ಆ ನಿಟ್ಟಿನಲ್ಲಿ ಅಗತ್ಯ ಪ್ರಯತ್ನ ಮಾಡುತ್ತೇವೆ ಎಂದರು.

ಅಸಮಾಧಾನಿತರನ್ನು ಕರೆದು ಮಾತನಾಡಿ ಸಮಸ್ಯೆ ಬಗೆಹರಿಸುವ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರ ಪ್ರಯತ್ನವನ್ನು ನಾನು ಸ್ವಾಗತಿಸ

ಮೊಸರಲ್ಲಿ ಕಲ್ಲು ಹುಡುಕುವುದೇ ಬಿಜೆಪಿಗರ ಕೆಲಸ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್

ಉಡುಪಿ: ವಸತಿ ಯೋಜನೆಯಲ್ಲಿ ಅಲ್ಪಸಂಖ್ಯಾತರಿಗೆ ಶೇಕಡ 5ರಷ್ಟು ಏರಿಕೆ ಮಾಡಿದ್ದು ಕೇಂದ್ರ ಸರ್ಕಾರ. ರಾಜ್ಯ ಸರ್ಕಾರ ಅದಕ್ಕೆ ಒಪ್ಪಿಗೆ ಸೂಚಿಸಿದೆಯಷ್ಟೇ. ಈ ವಿಷಯದಲ್ಲಿ ಬಿಜೆಪಿ ನಾಯಕರು ಮೊಸರಲ್ಲಿ ಕಲ್ಲು ಹುಡುಕುವ ಕೆಲಸ ಮಾಡುತ್ತಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಕಿಡಿ ಕಾರಿದರು.

ಸುದ್ದಿಗಾರರೊಂದಿಗೆ ಶುಕ್ರವಾರ ಮಾತನಾಡಿದ ಸಚಿವರು, ರಾಜಕಾರಣ ಮಾಡಲು ಬೇರೆ ವಿಚಾರ ಉಳಿದಿಲ್ಲ. ಮೊದಲು ಗ್ಯಾರಂಟಿ ಯೋಜನೆಗಳನ್ನು ಟೀಕೆ ಮಾಡಿದರು. ಗ್ಯಾರಂಟಿ ಯೋಜನೆಗಳು ಯಶಸ್ವಿ ಆಗುವುದಿಲ್ಲ ಎಂದರು. ನಾವು 136 ಸೀಟು ಗೆದ್ದರೂ ಆರು ತಿಂಗಳು ಸರ್ಕಾರ ಉಳಿಯಲ್ಲ ಎಂದರು, ಜನರ ಭಾವನೆಗಳ ಜೊತೆ ಬಿಜೆಪಿ ಆಟವಾಡುತ್ತದೆ. ಮಾತನಾಡಲು ಅವರಿಗೆ ಬೇರೇನೂ ಉಳಿದಿಲ್ಲ ಎಂದು ದೂರಿದರು.

ಮುಂಜಾಗ್ರತಾ ಕ್ರಮ ಕೈಗೊಳ್ಳಲು ಸೂಚನೆ : ಈ ವರ್ಷ ವಾಡಿಕೆಗಿಂತ ಹೆಚ್ಚಿನ ಮಳೆಯಾಗುವ ಲಕ್ಷಣ ಇದೆ. ಹೀಗಾಗಿ ಮಳೆ ಅವಾಂತರ ನಿಯಂತ್ರಿಸಲು ಮುಂಜಾಗ್ರತಾ ಕ್ರಮ ಕೈಗೊಳ್ಳಲು ಸೂಚಿಸಿದ್ದೇನೆ. ಯಾವುದೇ ಪ್ರಮಾಣದಲ್ಲಿ ಮಳೆ ಬಂದರೂ ನಾವು ಸಿದ್ಧವಾಗಿದ್ದೇವೆ ಎಂದು ಸಚಿವರು ಹೇಳಿದರು.

ಸೂಲಿಬೆಲೆ ಸುಳ್ಳಿನ ಚಕ್ರವರ್ತಿ: ಕುಂದಾಪುರದಲ್ಲಿ ಚಕ್ರವರ್ತಿ ಸೂಲಿಬೆಲೆ ಉಪನ್ಯಾಸಕ್ಕೆ ಎನ್‌ಎಸ್ ಯುಐ ಅಕ್ಷೇಪ ವ್ಯಕ್ತಪಡಿಸಿರುವ ಕುರಿತು ಪ್ರತಿಕ್ರಿಯಿಸಿದ ಸಚಿವರು, ಚಕ್ರವರ್ತಿ ಸೂಲಿಬೆಲೆ ಸುಳ್ಳಿನ ಚಕ್ರವರ್ತಿ. ಬಾಯಿ ತೆರೆದರೆ ರಾಮಾಯಣ, ಭಗವದ್ಗೀತೆ, ಮಹಾಭಾರತ ಹೇಳುತ್ತಾರೆ. ಆದರೆ ಯಾವ ಪ್ರಮಾಣದಲ್ಲಿ ಸುಳ್ಳು ಹೇಳುತ್ತಾರೆ ಅನ್ನೋದು ಇಡೀ ಕರ್ನಾಟಕಕ್ಕೆ ಗೊತ್ತು ಎಂದರು.

ಕಪ್ಪಗಿರುವುದನ್ನು ಬೆಳ್ಳಗೆ ಮಾಡುವುದರಲ್ಲಿ, ಬೆಳ್ಳಗೆ ಇರುವುದನ್ನು ಕಪ್ಪು ಮಾಡುವುದರಲ್ಲಿ ನಿಸ್ಸೀಮರು. ವಾಕ್ ಸ್ವಾತಂತ್ರ್ಯ ಸೇರಿದಂತೆ ಎಲ್ಲಾ ರೀತಿಯ ಸ್ವಾತಂತ್ರ್ಯವನ್ನು ಕಾಂಗ್ರೆಸ್ ಪಕ್ಷ ಕೊಟ್ಟಿದೆ. ಇಡೀ ದೇಶದ ಇತಿಹಾಸದಲ್ಲಿ ಸಂವಿಧಾನವನ್ನು ಎತ್ತಿ ಹಿಡಿದ ಪಕ್ಷ ಕಾಂಗ್ರೆಸ್ ಎಂದು ಸಚಿವರು ಹೇಳಿದರು.

ನಾವು ಚಕ್ರವರ್ತಿ ಸೂಲಿಬೆಲೆ ಅವರಿಂದ ಪಾಠ ಕೇಳಬೇಕಾಗಿಲ್ಲ. ಮೂರು ದಿನ ಉಡುಪಿ ಜಿಲ್ಲೆಯಲ್ಲಿ ಸೂಲಿಬೆಲೆ ಇರುವ ವಿಚಾರ ಪೊಲೀಸ್ ವರಿಷ್ಠಾಧಿಕಾರಿಗಳಿಂದ ತಿಳಿಯಿತು. ಖಂಡಿತವಾಗಿ ಸೂಲಿಬೆಲೆ ತಮ್ಮ ಪ್ರವಾಸ ಮಾಡಬಹುದು. ದ್ವೇಷದ ಭಾಷಣ, ಸುಳ್ಳು ಬಿತ್ತುವ ಕೆಲಸ, ವಿಷ ಬೀಜ ಬಿತ್ತುವ ಕೆಲಸ ಮಾಡದಿರಲಿ. ಯಾಕೆಂದರೆ ಉಡುಪಿ ಶಾಂತಿ ಪ್ರಿಯರ ಜಿಲ್ಲೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಬಿಜೆಪಿ ಶಾಸಕರ ಆಕ್ಷೇಪಕ್ಕೆ ಸಚಿವರ ತಿರುಗೇಟು

ಒಂದು ಕಡೆ ಬಿಜೆಪಿ ಕೋಮುವಾದವನ್ನು ಪ್ರಚೋದನೆ ಮಾಡುತ್ತದೆ. ನಾವು ಕೋಮು ಪ್ರಚೋದನೆ ಮಾಡುತ್ತಿಲ್ಲ ಎನ್ನುತ್ತಾರೆ. ಇನ್ನೊಂದು ಕಡೆ ಕೋಮು ನಿಗ್ರಹದಳಕ್ಕೆ ವಿರೋಧ ವ್ಯಕ್ತಪಡಿಸುತ್ತಾರೆ. ಇಂಥ ಮನೋಭಾವನೆಯ ಬಿಜೆಪಿ ಶಾಸಕರನ್ನು ನೋಡಿದರೆ ಅವರ ಮನಸ್ಥಿತಿ ಏನು ಅನ್ನೋದು ಉಡುಪಿಯ ಜನತೆಗೆ ಅರ್ಥವಾಗುತ್ತೆ ಎಂದು ಸಚಿವರು ಜಿಲ್ಲೆಯ ಬಿಜೆಪಿ ಶಾಸಕರ ವಿರುದ್ಧ ಕಿಡಿ ಕಾರಿದರು.

ಗೋಕಾಕ: ಇಲ್ಲಿಯ ರಾಕೇಡ್ ರಿದ್ಧಿ ಸಿದ್ಧಿ ಕಾರ್ಖಾನೆಯವರು ಪೋಲಿಸ್ ಇಲಾಖೆಗೆ ಹೊಸ 24 ಬ್ಯಾರಿಕೇಡಗಳನ್ನು ವಿತರಿಸಿದರು. ಡಿವೈಎಸ್‌ಪಿ ರವಿ ನಾಯಿಕ, ಸಿಪಿಐ ಸುರೇಶಬಾಬು, ಪಿಎಸ್‌ಐ ಕೆ ಬಿ ವಾಲಿಕಾರ, ರಾಕೇಡ್ ರಿದ್ಧಿ ಸಿದ್ಧಿ ಕಾರ್ಖಾನೆಯ ಪ್ಲಾಂಟ್ ಹೆಡ್ ಮಣಿವನ್ನನ, ಎಚ್‌ಆರ್ ಹೆಡ್ ಪ್ರಕಾಶ ಅವಟೆ, ಲೋಕೇಶ ಸಾತಪ್ಪಗೋಳ, ದುಂಡೇಶ ಶಟ್ಟಿಮನಿ ಸೇರಿದಂತೆ ಸಿಬ್ಬಂಧಿಯವರು ಇದ್ದರು.

ಕೇಂದ್ರ ಸರಕಾರ ದಶಕಗಳ ಜಡತ್ವ ಮುರಿದು ದಿಟ್ಟ ನಿರ್ಧಾರಗಳ ಮೂಲಕ ವಿಕಸಿತ ಭಾರತಕ್ಕೆ ಭದ್ರ ಬುನಾದಿ ಹಾಕಿದೆ

ಗೋಕಾಕ: ಕಳೆದ 11 ವರ್ಷಗಳಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದ ಕೇಂದ್ರ ಸರಕಾರ ದಶಕಗಳ ಜಡತ್ವ ಮುರಿದು ದಿಟ್ಟ ನಿರ್ಧಾರಗಳ ಮೂಲಕ ವಿಕಸಿತ ಭಾರತಕ್ಕೆ ಭದ್ರ ಬುನಾದಿ ಹಾಕಿದೆ ಎಂದು ಬಿಜೆಪಿ ಬೆಳಗಾವಿ ಜಿಲ್ಲಾ ಗ್ರಾಮಾಂತರ ಅಧ್ಯಕ್ಷ ಸುಭಾಸ ಪಾಟೀಲ ಹೇಳಿದರು.

ಅವರು, ನಗರದಲ್ಲಿ ಗುರುವಾರದಂದು ಶಾಸಕ ರಮೇಶ ಜಾರಕಿಹೊಳಿ ಅವರ ಗೃಹಕಚೇರಿ ಆವರಣದಲ್ಲಿ ಗೋಕಾಕ ಬಿಜೆಪಿ ನಗರ ಹಾಗೂ ಗ್ರಾಮೀಣ ಮಂಡಲದಿಂದ ಹಮ್ಮಿಕೊಂಡ ವಿಕಸಿತ ಭಾರತದ ಅಮೃತ ಕಾಲ ಸೇವೆ, ಸುಶಾಸನ, ಬಡವರ ಕಲ್ಯಾಣದ ಮೋದಿ ಸರಕಾರವು 11ವರ್ಷ ಪೂರ್ಣಗೊಂಡಿರುವದರಿಂದ ವಿಕಸಿತ ಭಾರತ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರಧಾನಿ ನರೇಂದ್ರ ಮೋದಿಯವರು ಹಲವಾರು ಜನಪರ ಯೋಜನೆಗಳನ್ನು ಜಾರಿಗೆ ತರುವದರ ಮೂಲಕ ಜನ ನಾಯಕರಾಗಿದ್ದಾರೆ. ಮೋದಿಯವರು ದೇಶದ ಬದ್ಧತೆಗೆ ಶ್ರಮಿಸುತ್ತಿದ್ದಾರೆ. ಹೀಗಾಗಿ ಹಳ್ಳಿಯಿಂದ ದಿಲ್ಲಿಯವರೆಗೆ 11ವರ್ಷದಲ್ಲಿ ಸಾಕಷ್ಟು ಅಭಿವೃದ್ಧಿಯನ್ನು ದೇಶ ಕಂಡಿದೆ. ಮುಂದಿನ ದಿನಗಳಲ್ಲಿ ಇದಕ್ಕಿಂತ ಹೆಚ್ಚು ಅಭಿವೃದ್ಧಿ ಕಾರ್ಯಗಳು ನಡೆಯಲಿವೆ ಎಂದು ತಿಳಿಸಿದರು.

ಕೇಂದ್ರ ಸರಕಾರದ 11ವರ್ಷಗಳ ಸಾಧನೆ ಪ್ರದರ್ಶನವನ್ನು ಯುವ ನಾಯಕ ಅಮರನಾಥ ಜಾರಕಿಹೊಳಿ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ನಗರ ಮಂಡಲ ಅಧ್ಯಕ್ಷ ಭೀಮಶಿ ಭರಮಣ್ಣವರ, ಗ್ರಾಮೀಣ ಮಂಡಲ ಅಧ್ಯಕ್ಷ ರಾಜೇಂದ್ರ ಗೌಡಪ್ಪಗೋಳ, ನಗರಸಭೆ ಅಧ್ಯಕ್ಷ ಪ್ರಕಾಶ ಮುರಾರಿ, ಜಿಪಂ ಮಾಜಿ ಸದಸ್ಯರಾದ ಟಿ ಆರ್ ಕಾಗಲ, ಎಮ್ ಎಲ್ ತೋಳಿನವರ, ಬಿಜೆಪಿ ಮುಖಂಡರಾದ ಲಕ್ಷ್ಮಣ ತಪಸಿ, ಸಂದೀಪ ದೇಶಪಾಂಡೆ, ಮಹೇಶ ಮೋಹಿತೆ, ಶಿವಾನಂದ ಹನುಮಸಾಗರ, ಬಸನಗೌಡ ಕೊಳದೂರ, ಶಕೀಲ ಧಾರವಾಡಕರ, ಶಾಮಾನಂದ ಪೂಜೇರಿ, ಶಿವಾನಂದ ಪಾಟೀಲ, ಸುರೇಶ ಪತ್ತಾರ, ರಾಜೇಶ್ವರಿ ಒಡೆಯರ ಇದ್ದರು.

ದೇಶದಲ್ಲಿ ಪ್ರಥಮ: ಜಮಖಂಡಿ ಶುಗರ್ಸ್‌ನಿಂದ ಪರಿಸರಸ್ನೇಹಿ ಪ್ರಯೋಗ ಯಶಸ್ವಿ

ಎಥೆನಾಲ್‌ಗೆ ಮತ್ತೊಂದು ಪರ್ಯಾಯ ಬೆಳೆ ಸಿಹಿಜೋಳ

ಜಮಖಂಡಿ: ದೇಶದ ಬಹುಪಾಲು ಆದಾಯ ಇಂಧನಕ್ಕಾಗಿ ವ್ಯಯವಾಗುತ್ತಿರುವುದಿಂದ ದೇಶದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಆರ್ಥಿಕ ಕೊರತೆ ಎದುರಾಗುತ್ತಿದೆ. ಈ ನಿಟ್ಟಿನಲ್ಲಿ ರೈತರು ಸಿಹಿಜೋಳದಂತಹ ಬೆಳೆಗಳನ್ನು ಬೆಳೆದು ಭಾರತದೇಶವನ್ನು ಇಂಧನ ಸ್ವಾವಲಂಭಿ ರಾಷ್ಟ್ರವಾಗಲು ಪ್ರಯತ್ನಿಸಬೇಕು ಎಂದು ಜಮಖಂಡಿ ಸಕ್ಕರೆ ಕಾರ್ಖಾನೆ ಆಡಳಿತ ತಜ್ಞ ಪ್ರದೀಪ ರೆಡ್ಡಿ ಹೇಳಿದರು.

ತಾಲೂಕಿನ ಚಿಕ್ಕಪಡಸಲಗಿ ಗ್ರಾಮದ ವಿಜಯ ಕಲ್ಲಪ್ಪ ಬರಗಿ ಜಮೀನಿನಲ್ಲಿ ಪ್ರಾಯೋಗಿಕವಾಗಿ ಬೆಳೆದ ಸಿಹಿಜೋಳ ಬೆಳೆಯ ಕ್ಷೇತ್ರವನ್ನು ಪರಿಶೀಲಿಸಿ ಮಾತನಾಡಿದರು.

ಎಥನಾಲಗೆ ಮತ್ತೋಂದು ಪರ್ಯಾಯ ಬೆಳೆಯುವದರಿಂದ ದೇಶಕ್ಕೆ ಅಗಾಧ ಪ್ರಮಾಣದ ವಿದೇಶಿ ವಿನಿಮಯ ಉಳಿತಾಯ ಆಗುವುದರಿಂದ ಮೂಲಸೌಕರ್ಯಗಳ ಅಭಿವೃದ್ಧಿಗೆ ಒತ್ತುಕೊಡಲು ಸರಕಾರಕ್ಕೆ ಸಾಧ್ಯವಾಗಲಿದೆ. ಸರಕಾರಗಳು ಸಿಹಿಜೋಳದಂತಹ ಪರ್ಯಾಯ ಇಂಧನ ಉತ್ಪಾದನೆಗೆ ಹೆಚ್ಚಿನ ಅನುದಾನ ಕಲ್ಪಿಸಲು ಮುಂದೆ ಬರಬೇಕಾಗಿದೆ ಎಂದರು.

ಕೃಷಿತಜ್ಞ ಬಸವರಾಜ ಗಿರಗಾಂವಿ

ಮಾತನಾಡಿ, ಕಬ್ಬು ಬೆಳೆ ಇಂದು ದೇಶದ ಪ್ರಮುಖ ವಾಣಿಜ್ಯ ಬೆಳೆಯಾಗಿದ್ದು, ಈ ಬೆಳೆಯಿಂದ ಹಲವಾರು ಸಕ್ಕರೆ ಕಾರ್ಖಾನೆಗಳು ಹುಟ್ಟಿಕೊಂಡ ಪ್ರಯುಕ್ತ ಜನರ ಜೀವನಮಟ್ಟ ಸುಧಾರಣೆ ಆಗಿದೆ. ಆದರೆ ಒಂದೇ ಜಮೀನಿನಲ್ಲಿ ದೀರ್ಘಾವಧಿಯ ನಿರಂತರ ಕಬ್ಬು ಬೆಳೆಯನ್ನು ಬೆಳೆಯುತ್ತಿರುವುದಂದ ಮತ್ತು ಅವೈಜ್ಞಾನಿಕ ಬೇಸಾಯ ಪದ್ಧತಿಯಿಂದ ಭೂಮಿ ತನ್ನ ಫಲವತ್ತತೆ ಕಳೆದುಕೊಳ್ಳುತ್ತಿದೆ. ಇದರಿಂದ ಇಳುವರಿ ಕೂಡ ವರ್ಷದಿಂದ ವರ್ಷಕ್ಕೆ ಕಡಿಮೆಯಾಗುತ್ತಿದೆ. ಕೃಷಿಯಲ್ಲಿ ಭೂಮಿಯ ವಿಶ್ರಾಂತಿ, ಇಳುವರಿ ಮತ್ತು ಫಲವತ್ತತೆಯು ಬಹಳ ಮಹತ್ವದ್ದಾಗಿದೆ. ಅಲ್ಪಾವಧಿಯ ಸಿಹಿಜೋಳ ಬೆಳೆ ಉತ್ತಮ ಮಣ್ಣಿನ ಆರೋಗ್ಯದೊಂದಿಗೆ ಭವಿಷ್ಯದ ವಾಣಿಜ್ಯ ಬೆಳೆಯಾಗಿ ಹೊರಹೊಮ್ಮಲಿದೆ ಎಂದರು.

ರಸಾಯನತಜ್ಞ ಭರತೇಶ ಕಾಮತೆ ಮಾತನಾಡಿ, ಸಿಹಿಜೋಳ ಬೆಳೆಯ ಹಲವು ಹಂತದ ಬೆಳೆಯ ಮಾದರಿಗಳನ್ನು ಪ್ರಯೋಗಾಲಯದಲ್ಲಿ ಪರೀಕ್ಷಿಸಲಾಗಿ ಪ್ರತಿಟನ ಗುಣಮಟ್ಟದ ಸಿಹಿಜೋಳ ಬೆಳೆಯಿಂದ ಅಂದಾಜು 40 ರಿಂದ 50 ಲೀಟರದಷ್ಟು ಎಥೆನಾಲ್ ಉತ್ಪಾದಿಸಬಹುದಾಗಿದೆ. ಸಂಸ್ಕರಣ ಹಂತದಲ್ಲಿ ಸಿಹಿಜೋಳ ಬೆಳೆಯು ಕಬ್ಬು ಬೆಳೆಗಿಂತ ಸರಳವಾದ ವಿಧಾನವಾಗಿದೆ ಎಂದರು.

ದೇಶದಲ್ಲಿಯೆ ಪ್ರಥಮ ಪ್ರಯೋಗ.....

ದೇಶದಲ್ಲಿಯೆ ಇದೊಂದು ಪ್ರಥಮ ಪ್ರಯೋಗವಾಗಿದ್ದು, ಕಾರ್ಖಾನೆ ಅಧ್ಯಕ್ಷ ಮಾಜಿ ಶಾಸಕ ಆನಂದ ನ್ಯಾಮಗೌಡ ಹೆಚ್ಚಿನ ಆಸಕ್ತಿ ವಹಿಸಿದ್ದಾರೆ. 2 ಎಕರೆ ಕ್ಷೇತ್ರದಲ್ಲಿ ಅಡ್ವಾಂಟಾ ಸೀಡ್ಸ್ ಕಂಪನಿಯ ಶಶಿಕಾಂತ ಕುಲಕರ್ಣಿ ಮತ್ತು ಜಮಖಂಡಿ ಸಕ್ಕರೆ ಕಾರ್ಖಾನೆ ಕೃಷಿತಜ್ಞ ಬಸವರಾಜ ಗಿರಗಾಂವಿ ಮಾರ್ಗದರ್ಶನದಲ್ಲಿ ಸಿಹಿಜೋಳ ಬೆಳೆ ಬೆಳೆಯ ಲಾಗಿದೆ. ಬಿತ್ತನೆ ಸಮಯದಲ್ಲಿ ಪ್ರತಿ ಎಕರೆಗೆ 2 ಕಿಲೋ ಬೀಜ ಮತ್ತು ಒಂದು ಚೀಲ ಡಿ.ಎ.ಪಿ ಗೊಬ್ಬರ ಬಳಕೆ, ಬಿತ್ತನೆ ತಕ್ಷಣ ಕಳೆ ನಿಯಂತ್ರಣಕ್ಕಾಗಿ, ಒಂದು ತಿಂಗಳ ನಂತರ ಸುಳಿ ಬೀಳುವುದನ್ನು ತಪ್ಪಿಸಲು ರಾಸಾಯನಿಕಗಳ ಸಿಂಪರಣೆ ಮಾಡಲಾಗಿದೆ. ಒಂದು ತಿಂಗಳ ನಂತರ ಒಂದು ಚೀಲ ಯೂರಿಯಾ ಗೊಬ್ಬರ ಕೊಡಲಾಗಿದೆ. ಈ ಬೆಳೆ 100 ದಿನದಲ್ಲಿ ಕಟಾವಿಗೆ ಬರಲಿದೆ. ಬೆಳೆಯನ್ನು ಎಲೆ, ಕಾಂಡ ಮತ್ತು ತೆನೆಯೊಂದಿಗೆ ಸಂಪೂರ್ಣವಾಗಿ ಕಟಾವು ಮಾಡಿ ಕಾರ್ಖಾನೆಗೆ ಪೂರೈಸಲಾಗುತ್ತದೆ. ಪ್ರತಿ ಎಕರೆಗೆ ಅಂದಾಜು 25 ರಿಂದ 30 ಟನ ಬೆಳೆ ಬೆಳೆಯಬಹುದು.

ಸಮಾಜದ ಸಬಲೀಕರಣ ಬಜಾಜ್ ಸಂಸ್ಥೆಯ ಗುರಿಯಾಗಿದೆ : ಸುಮಂತ

ಮೂಡಲಗಿ : ನಗರದಲ್ಲಿ ನೂತನವಾಗಿ ಬಜಾಜ್ ಗೋಲ್ಡ್ ಲೋನ್ ಶಾಖೆ ಕಾರ್ಯಾರಂಭಗೊಂಡಿರುವ ಹಿನ್ನೆಲೆ ಮೂಡಲಗಿ ತಾಲೂಕಿನ ನಾಗನೂರ ಧರ್ಮಟ್ಟಿ ಪಟಗುಂದಿ ಅರಳಿಮಟ್ಟಿ ಗ್ರಾಮಗಳ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಒಂದನೇ ತರಗತಿಗೆ ಪ್ರವೇಶ ಪಡೆದ ಮಕ್ಕಳಿಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಶಾಲಾ ಬ್ಯಾಗಗಳನ್ನು ವಿತರಣೆ ಮಾಡಲಾಯಿತು

ಈ ಸಂದರ್ಭದಲ್ಲಿ ಮಾತನಾಡಿದ ಶಾಖೆಯ ವ್ಯವಸ್ಥಾಪಕ ಸುಮಂತ ವರ್ಣೇಕರ್ ಅವರು ಆರ್ಥಿಕ ನೆರವಿನೊಂದಿಗೆ ಸಮಾಜದ ಸಬಲೀಕರಣವು ಬಜಾಜ್ ಸಂಸ್ಥೆಯ ಗುರಿಯಾಗಿದೆ ಶಿಕ್ಷಣದಿಂದ ಮಾತ್ರ ಪ್ರಜ್ಞಾವಂತ ಸಮಾಜದ ನಿರ್ಮಾಣ ಸಾಧ್ಯ. ಶಿಕ್ಷಣವಿಲ್ಲದೆ ಉದ್ಯೋಗವಿಲ್ಲದೆ ಆರ್ಥಿಕ ಸಂಕಷ್ಟಕ್ಕೆ ಒಳಗಾಗಿ ಸಾಲದ ಸುಳಿಗೆ ಸಿಲುಕಿ ಆತ್ಮಹತ್ಯೆ ಅಂತಹ ತಪ್ಪು ನಿರ್ಧಾರಗಳಿಗೆ ಯುವಕರು ಬಲಿಯಾಗುತ್ತಿದ್ದಾರೆ ಹೀಗಾಗಿ ಬಾಲ್ಯದಲ್ಲಿಯೇ ಮಕ್ಕಳಿಗೆ ಶಿಕ್ಷಣದ ಮಹತ್ವವನ್ನು ತಿಳಿಸುವ ಮತ್ತು ಪ್ರೋತ್ಸಾಹಿಸುವುದು ಪ್ರತಿಯೊಬ್ಬರ ನೈತಿಕ ಹೊಣೆಗಾರಿಕೆಯಾಗಿದೆ ಎಂದರು ಬಜಾಜ್ ಸಂಸ್ಥೆಯ ಕಾರ್ಯವನ್ನು ಶ್ಲಾಘಿಸಿ ಶಾಖೆಯ ವ್ಯವಸ್ಥಾಪಕರಿಗೆ ಶಾಲಾ ಮಂಡಳಿಯವರು ಸನ್ಮಾನಿಸಿ ಗೌರವಿಸಿದರು.

ಅಲೆಮಾರಿ ಜನಾಂಗದ ಅಭಿವೃದ್ಧಿ ಸಮಿತಿ ಸದಸ್ಯರ ಆಯ್ಕೆಗೆ ಅರ್ಜಿ ಆಹ್ವಾನ

ಕೊಪ್ಪಳ : ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಜಿಲ್ಲಾ ಮಟ್ಟದ ಅಭಿವೃದ್ಧಿ ಮತ್ತು ಮೀಸಲಾತಿ ಸಲಹಾ ಸಮಿತಿಗೆ ಅಲೆಮಾರಿ ಜನಾಂಗದ ಅಭಿವೃದ್ಧಿ ಸಮಿತಿ ಸದಸ್ಯರುಗಳ ಆಯ್ಕೆಗಾಗಿ ಅರ್ಜಿ ಆಹ್ವಾನಿಸಲಾಗಿರುತ್ತದೆ.

ನಾಮನಿರ್ದೇಶಿತ ಸದಸ್ಯತ್ವಕ್ಕೆ ಅರ್ಜಿ ಸಲ್ಲಿಸುವವರು ಅಲೆಮಾರಿ/ಅರೆ ಅಲೆಮಾರಿ ಸಮುದಾಯದ ಜನಾಂಗದವರಿಗೆ ಪ್ರತಿನಿಧಿತ್ವ ವಹಿಸಿ ಸಮಾಜ ಕಾರ್ಯ ನಿರ್ವಹಿಸಿರಬೇಕು. ಅಲೆಮಾರಿ/ಅರೆ ಅಲೆಮಾರಿ ಸಮುದಾಯಕ್ಕೆ ಸೇರಿದವರಾಗಿರಬೇಕು. ಈ ಕುರಿತು ಸಂಬಂಧಿಸಿದ ತಹಶೀಲ್ದಾರರಿಂದ ಪಡೆದ ಜಾತಿ ಆದಾಯ ಪ್ರಮಾಣ ಪತ್ರ ಲಗತ್ತಿಸಬೇಕು. ಅಲೆಮಾರಿ/ಅರೆಅಲೆಮಾರಿ ಸಮಾಜದ ಏಳಿಗಾಗಿ ಸಮಾಜ ಸೇವೆಯಲ್ಲಿ ತೊಡಗಿರುವ ಕುರಿತು ದಾಖಲೆಗಳನ್ನು ಭಾವಚಿತ್ರದೊಂದಿಗೆ ಸಲ್ಲಿಸಬೇಕು. ಕೊಪ್ಪಳ ಜಿಲ್ಲೆಗೆ ಸಂಬಂಧಿಸಿದವರಾಗಿರಬೇಕು. ಶೈಕ್ಷಣಿಕ ದಾಖಲೆಗಳನ್ನು ಲಗತ್ತಿಸಬೇಕು. ಯಾವುದೇ ರೀತಿಯ ಕ್ರಿಮಿನಲ್ ಮೊಕದ್ದಮೆಗಳನ್ನು ಎದುರಿಸುತ್ತಿಲ್ಲವೆಂದು ರೂ.100/- ಛಾಪಾ ಕಾಗದದ ಮೇಲೆ ಮುಚ್ಚಳಿಕೆಯನ್ನು ನೋಟರಿ ಮುಖಾಂತರ ಸಲ್ಲಿಸಬೇಕು.

ಆಯಾ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಂದ ನಿಗದಿತ ನಮೂನೆ ಪಡೆದು ಭರ್ತಿ ಮಾಡಿ ಜುಲೈ 09 ರೊಳಗೆ ಅರ್ಜಿಗಳನ್ನು ಸಲ್ಲಿಸಬೇಕು ಎಂದು ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿಯವರು ಕಳೆದ 11ವರ್ಷಗಳಿಂದ ಭಾರತದ ಸಮಗ್ರ ಅಭಿವೃದ್ಧಿಗೆ ಶ್ರಮಿಸುತ್ತಿದ್ದು

ಗೋಕಾಕ: ಪ್ರಧಾನಿ ನರೇಂದ್ರ ಮೋದಿಯವರು ಕಳೆದ 11ವರ್ಷಗಳಿಂದ ಭಾರತದ ಸಮಗ್ರ ಅಭಿವೃದ್ಧಿಗೆ ಶ್ರಮಿಸುತ್ತಿದ್ದು, ಮುಂದಿನ ದಿನಗಳಲ್ಲಿ ಭಾರತವು ವಿಶ್ವಕ್ಕೆ ಗುರುವಾಗುವ ಕಾಲ ಸನ್ನಿಹಿತವಾಗಿದೆ ಎಂದು ಬೆಳಗಾವಿ ಜಿಲ್ಲಾ (ಗ್ರಾ) ಬಿಜೆಪಿ ಅಧ್ಯಕ್ಷ ಸುಭಾಸ ಪಾಟೀಲ ಹೇಳಿದರು.

ಇಲ್ಲಿಯ ಎನ್‌ಎಸ್‌ಎಫ್ ಕಚೇರಿಯಲ್ಲಿ ಶುಕ್ರವಾರದಂದು ಅರಭಾವಿ ಬಿಜೆಪಿ ಮಂಡಲ ಹಮ್ಮಿಕೊಂಡಿದ್ದ ಸಂಕಲ್ಪ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ನರೇಂದ್ರ ಮೋದಿಯವರ ಹನ್ನೊಂದು ವರ್ಷಗಳ ಸಾಧನೆಗಳನ್ನು ಪ್ರತಿ ಮತಗಟ್ಟೆಗಳ ಮೂಲಕ ತಿಳಿಸುವ ಕೆಲಸ ಕಾರ್ಯಕರ್ತರದ್ದು ಎಂದು ತಿಳಿಸಿದರು.

ಪ್ರಧಾನಿ ನರೇಂದ್ರ ಮೋದಿಯವರು 11ವರ್ಷಗಳಲ್ಲಿ ದೇಶವನ್ನು ಸಾಕಷ್ಟು ಅಭಿವೃದ್ಧಿ ಮಾಡಿದ್ದಾರೆ. ನೂರಾರು ಹೊಸ ಹೊಸ ಯೋಜನೆಗಳನ್ನು ಬಡವರಿಗೆ ದೊರಕಿಸಿಕೊಟ್ಟಿದ್ದಾರೆ. ಆಪರೇಷನ್ ಸಿಂದೂರ ಮೂಲಕ ಪಾಕ್ ಭಯೋತ್ಪಾದಕರಿಗೆ ತಕ್ಕ ಶಾಸ್ತಿ ಮಾಡಿದ್ದಾರೆ. ಯುದ್ಧಕ್ಕೂ ಸಿದ್ಧವೆಂಬುದನ್ನು ಇತ್ತೀಚೆಗೆ ಸಾಬೀತುಪಡಿಸಿದ್ದಾರೆ. ಯುದ್ಧ ವಿಮಾನಗಳು, ಕ್ಷಿಪಣಿಗಳನ್ನು ನಾವೇ ತಯಾರು ಮಾಡುವಷ್ಟು ನಾವಿಂದು ಬೆಳೆದಿದ್ದೇವೆ. ಇಲ್ಲಿಯತನಕ ಬೇರೆಯವರ ಕಡೆಗೆ ಅವಲಂಬಿತರಾಗಿದ್ದೇವು. ಪ್ರಧಾನಿಯವರ ದೂರದೃಷ್ಟಿಯಿಂದಾಗಿ ಭಾರತವು ಜಾಗತೀಕವಾಗಿ ದೊಡ್ಡ ಪ್ರಮಾಣದಲ್ಲಿ ಬೆಳೆಯುತ್ತಿದೆ. ಶರವೇಗದಲ್ಲಿ ಅಭಿವೃದ್ಧಿಯಾಗುತ್ತಿದೆ. ಇದಕ್ಕೆಲ್ಲ ಮೋದಿಯವರು ಹಾಕಿಕೊಟ್ಟ ಜನಪ್ರಿಯ ಯೋಜನೆಗಳೇ ಕಾರಣವೆಂದು ತಿಳ

ಓದು- ಪುಸ್ತಕ ಓದು : ಓದುವ ಹವ್ಯಾಸ ನಿತ್ಯ ನಿರಂತರವಾಗಿರಲಿ-ಸಂತೋಷ ಬಂಡೆ

ವಿಜಯಪುರ: ಓದುವುದರಿಂದ ಮಕ್ಕಳಲ್ಲಿ ಸ್ಮರಣಶಕ್ತಿ, ಏಕಾಗ್ರತೆ ಸುಧಾರಿಸುತ್ತದೆ. ಓದುವುದು ನಮ್ಮ ಕಲ್ಪನೆ ಮತ್ತು ಸೃಜನಶೀಲತೆಗೆ ಇಂಧನ ನೀಡುತ್ತದೆ. ಪುಸ್ತಕ ಓದುವ ಹವ್ಯಾಸ ನಿತ್ಯ ನಿರಂತರವಾಗಿರಲಿ ಎಂದು ಶಿಕ್ಷಕ ಸಂತೋಷ ಬಂಡೆ ಹೇಳಿದರು.

ಶುಕ್ರವಾರದಂದು ತಾಲೂಕಿನ ನಾಗಠಾಣ ಗ್ರಾಮದ ಅರಿವು ಕೇಂದ್ರದಲ್ಲಿ 'ರಾಷ್ಟ್ರೀಯ ಓದುವ ದಿನ'ದ ನಿಮಿತ್ತ ಹಮ್ಮಿಕೊಂಡ 'ಓದು– ಪುಸ್ತಕ ಓದು'–ಚಿಂತನ ಗೋಷ್ಠಿಯನ್ನು ಉದ್ಘೇಶಿಸಿ ಅವರು ಮಾತನಾಡಿದರು.

ಓದುವುದರಿಂದ ಇತಿಹಾಸ, ವಿಜ್ಞಾನ, ಸಾಹಿತ್ಯದಂತಹ ಅನೇಕ ವಿಷಯಗಳನ್ನು ಅನ್ವೇಷಿಸಿ, ಆಳವಾದ ತಿಳಿವಳಿಕೆ, ಜ್ಞಾನ ಪಡೆಯಲು ಸಾಧ್ಯ. ಓದುವ ಮೂಲಕ, ನಾವು ಹೊಸ ಸಂಸ್ಕೃತಿ, ವಿಚಾರ ಮತ್ತು ದೃಷ್ಟಿಕೋನಗಳನ್ನು ಅರಿತು, ನಮ್ಮ ಜ್ಞಾನ ವಿಸ್ತರಿಸಿಕೊಳ್ಳಲು ಸಾಧ್ಯ ಎಂದು ಹೇಳಿದರು.

ಜ್ಯೋತಿ ಬೆಳಗಿಸಿ ಮಾತನಾಡಿದ ಕೆಪಿಎಸ್ ಶಾಲೆಯ ಮುಖ್ಯ ಶಿಕ್ಷಕ ಎಸ್ ಆರ್ ರೇವತಾಗಾಂವ, ಓದುವದರಿಂದ ನಮ್ಮ ಶಬ್ದಕೋಶ ವಿಸ್ತಾರವಾಗಿ ಭಾಷಾ ಕೌಶಲ್ಯ ವೃದ್ಧಿಯಾಗುತ್ತದೆ. ಓದುವುದು ನಮ್ಮ ಅರಿವಿನ ಬೆಳವಣಿಗೆಯನ್ನು ಉತ್ತೇಜಿಸಿ, ಭಾವನಾತ್ಮಕ ಯೋಗಕ್ಷೇಮವನ್ನು ಹೆಚ್ಚಿಸುವ ಜತೆಗೆ ಸೃಜನಶೀಲತೆಯನ್ನು ಪೋಷಿಸುತ್ತದೆ ಎಂದು ಹೇಳಿದರು.

ಗ್ರಂಥಪಾಲಕ ಮಂಜುನಾಥ ಗಂಗನಳ್ಳಿ ಮಾತನಾಡಿ, "ಓದುವ ಪಿತಾಮಹ" ಎಂದೇ ಖ್ಯಾತಿಯಾದ ಪಿ ಎನ್ ಪಣಿಕ್ಕರ್ ಅವರು ಗ್ರಂಥಾಲಯ ಚಳುವಳಿ ಮೂಲಕ ಭಾರತದಲ್ಲಿ ಓದುವ ಪ್ರೀತಿಯನ್ನು ಹುಟ್ಟುಹಾಕಿದರು. ಓದುವುದು ನಮ್ಮ ಜೀವನದ ಅವಿಭಾಜ್ಯ ಅಂಗವಾಗಬೇಕಿದೆ ಎಂದು ಹೇಳಿದರು.

ಶಿಕ್ಷಕರಾದ ಸಂತೋಷ ಹಳ್ಳಿಕೇರಿ,ಎನ್ ಎಸ್ ಪಾಟೀಲ, ಸಂತೋಷ ಪವಾರ, ಬಿ ಡಿ ಸಿನಖೇಡ, ಆನಂದ ಗಂಗನಳ್ಳಿ ಸೇರಿದಂತೆ ಮಕ್ಕಳು ಭಾಗವಹಿಸಿದ್ದರು.

ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ

ಯರಗಟ್ಟಿ: ಸಮೀಪದ ಗುಡಮಕೇರಿ ಗ್ರಾಮದ ದುರ್ಗಾದೇವಿ ದೇವಸ್ಥಾನದ ಆವರಣದಲ್ಲಿ 2023–24ನೇ ಸಾಲಿನ ಅಂದಾಜು ಮೊತ್ತ ರೂ. 5 ಲಕ್ಷದ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಮಾಜಿ ಸಂಸದೆ ಮಂಗಲಾ ಅಂಗಡಿ ಭೂಮಿ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ, ಗ್ರಾ. ಪಂ. ಉಪಾಧ್ಯಕ್ಷ ಗುರು ವಾಲಿ, ಮಾಜಿ ಜಿ. ಪಂ. ಸದಸ್ಯ ಅಜೀತಕುಮಾರ ದೇಸಾಯಿ, ಮಾಜಿ ತಾ. ಪಂ. ಅಧ್ಯಕ್ಷ ಪರ್ವತಗೌಡ ಪಾಟೀಲ, ಬಿಜೆಪಿ ಮಂಡಳ ಅಧ್ಯಕ್ಷ ವಿರೂಪಾಕ್ಷ ಮಾಮನಿ, ಪಿಕೆಪಿಎಸ್ ಅಧ್ಯಕ್ಷ ಮಹಾಂತೇಶ ಗೋಡಿ, ಮಡಿವಾಳಪ್ಪ ಬಿದರಗಡ್ಡಿ, ಎಸ್. ಎಚ್. ನಾಯ್ಕರ, ಮಹಾದೇವ ಯಂಡ್ರಾಪಿ, ಜಗದೀಶ ಕೌಜಗೇರಿ, ಈರಣ್ಣಾ ಹೊಸಮನಿ, ವಾಚಪೆ ಗುಡುಮಕೇರಿ, ಶಿವಪ್ಪ ಮಾದನ್ನವರ, ಮಲ್ಲಪ್ಪ ವಾರ್ಲಗಟ್ಟಿ, ಮಾಜಿ ಗ್ರಾ. ಸದಸ್ಯೆ ಅನ್ನವನ್ನು ನಾಯ್ಕರ, ಶಿವಪ್ಪ ಬಾಜನವರ, ಮಾರುತಿ ನಾಯ್ಕರ ಸೇರಿದಂತೆ ಗ್ರಾಮದ ಹಿರಿಯರು, ಮುಖಂಡರು ಉಪಸ್ಥಿತರಿದ್ದರು.

ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಆನ್‌ಲೈನ್ ಅರ್ಜಿಗೆ ಸಲ್ಲಿಕೆ ಜೂನ್ 25 ವರಿಗೆ ಮುಂದುವರಿದಿದೆ.

ಮುದ್ದೇಬಿಹಾಳ: 2025–26ನೇ ಸಾಲಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಕಲ್ಪಿಸಲು ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದ್ದು, ದಿನಾಂಕ 15 –6–2025 ರವರೆಗೆ ಅವಕಾಶವನ್ನು ಕಲ್ಪಿಸಲಾಗಿದೆ. ಕೆಲವು ತಾಂತ್ರಿಕ ಸಮಸ್ಯೆಗಳಿಂದ ಅರ್ಜಿ ಸಲ್ಲಿಸಲು ಸಾಧ್ಯವಾಗಿರುವುದಿಲ್ಲವೆಂದು, ಹಿನ್ನೆಲೆಯಲ್ಲಿ ಅರ್ಜಿ ಸಲ್ಲಿಕೆಯ ದಿನಾಂಕ:25.06.2025 ರವರೆಗೆ ವಿಸ್ತರಿಸಲಾಗಿದ್ದು ಎಲ್ಲಾ ಸರ್ಕಾರದ ಕಛೇರಿಗಳು ಮತ್ತು ಶಾಲೆಗಳಯಲ್ಲಿ ನಾಮಫಲಕಗಳಲ್ಲಿ ಪ್ರಕಟಿಸಲು ಕ್ರಮವಹಿಸುವಂತೆ ಸೂಚಿಸಲಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಶಿವಲೀಲಾ ಕೊಣ್ಣೂರ, ಅವರು ಪತ್ರಿಕಾ ಪ್ರಕಟಣೆ ತಿಳಿಸಿದ್ದಾರೆ.

ಹೆಸ್ಕಾಂ : ಇಂದು ಗ್ರಾಹಕರ ಕುಂದು ಕೊರತೆ ಸಭೆ

ಬಾಗಲಕೋಟ : : ಮುಧೋಳ ತಾಲೂಕಿನ ಲೋಕಾಪೂರ ಹೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಚೇರಿಯಲ್ಲಿ ಜೂನ್ 21 ರಂದು ಬೆಳಿಗ್ಗೆ 10.30 ಗಂಟೆಗೆ ಬಾಗಲಕೋಟೆ ಹೆಸ್ಕಾಂ ಅಧೀಕ್ಷಕ ಅಭಿಯಂತರರ ಅಧ್ಯಕ್ಷತೆಯಲ್ಲಿ ವಿದ್ಯುತ್ ಗ್ರಾಹಕರ ಕುಂದು ಕೊರತೆ ಸಭೆಯನ್ನು ಹಮ್ಮಿಕೊಳ್ಳಲಾಗಿದೆ. ಸದರಿ ಸಭೆಗೆ ಗ್ರಾಹಕರು ಆಗಮಿಸಿ ತಮ್ಮ ವಿದ್ಯುತ್‌ಗೆ ಸಂಬಂಧಿತ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕೆಂದು ಬಾಗಲಕೋಟೆ ಹೆಸ್ಕಾಂ ಅಧೀಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲಾ ಕೃಷಿ ಕೇಂದ್ರದಲ್ಲಿ ಒಂದು ದಿನದ ತರಬೇತಿ

ಧಾರವಾಡ : ಜಿಲ್ಲಾ ಕೃಷಿ ತರಬೇತಿ ಕೇಂದ್ರ ಧಾರವಾಡದಲ್ಲಿ ರೈತರು ಮತ್ತು ಕೃಷಿ ಪಂಪು, ಉಪಕರಣಗಳ ತಂತ್ರಜ್ಞರಿಗೆ ಬಿ.ಇ.ಇ ಸ್ಟಾರ್ ಲೇಬಲ್‌ವುಳ್ಳ ಇಂಧನದಕ್ಷ ಪಂಪ್‌ಸೆಟ್ ಮತ್ತು ನೀರಿನ ಸಂರಕ್ಷಣೆ ಕುರಿತು ನುರಿತ ತಜ್ಞ–ರಿಂದ ಒಂದು ದಿನದ ತರಬೇತಿ ಮತ್ತು ಜಾಗೃತಿ ಕಾರ್ಯಾಗಾರವನ್ನು ಜೂನ್ 23, 2025 ರಂದು ಏರ್ಪಡಿಸಲಾಗಿದೆ.

ಆಸಕ್ತ ಧಾರವಾಡ ಜಿಲ್ಲೆಯ ರೈತರು ದೂರವಾಣಿ ಸಂಖ್ಯೆ:0836–2978374 ಅಥವಾ 6360494057 ಗೆ ಸಂಪರ್ಕಿಸಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬೇಕು ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಂದು ಬಿಜೆಪಿ ವತಿಯಿಂದ ಅಂತರಾಷ್ಟ್ರೀಯ ಯೋಗ ದಿನಾಚರಣೆ

ಮುದ್ದೇಬಿಹಾಳ: ಭಾರತೀಯ ಜನತಾ ಪಾರ್ಟಿ,ಮುದ್ದೇಬಿಹಾಳ ಮಂಡಲದಿಂದ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಪಟ್ಟಣದಲ್ಲಿ ಜೂನ್ 21 ರಂದು ಬೆಳಿಗ್ಗೆ 5.30 ಘಂಟೆಗೆ ಶ್ರೀ ಸಾಯಿ ರಂಗ ಮಂದಿರ ಪ್ಲಿ.ಬಿ.ಸಿ ಹೈಸ್ಕೂಲ್ ಆವರಣದಲ್ಲಿ ಯೋಗ ದಿನ ಆಚರಿಸಲು ನಿಚ್ಚಿಸಿದ್ದು. ಆತ್ಮೀಯ ಪಕ್ಷದ ಮುಖಂಡರು ಪದಾಧಿಕಾರಿಗಳು ಎಲಾ ಮೋರ್ಚಾ ಪದಾಧಿಕಾರಿಗಳು, ಕಾರ್ಯಕರ್ತರು ಆಗಮಿಸಬೇಕೆಂದು ಎಂದು ಬಿಜೆಪಿ ಮಂಡಲ ತಾಲ್ಲೂಕು ಅಧ್ಯಕ್ಷ ಜಗದೀಶ್ ಪಂಪಣ್ಣವರ,ಬಿಜೆಪಿ ಪ್ರಧಾನ ಕಾರ್ಯದರ್ಶಿ ಸಂಜು ಬಾಗೇವಾಡಿ, ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿಕೇಂದ್ರೀಕರಣ ವ್ಯವಸ್ಥೆಗೆ ಬಲ ತುಂಬುವ ಕೆಲಸ ಮಾಡೋಣ : ಚನ್ನರಾಜ ಹಟ್ಟಿಹೊಳಿ

ಗ್ರಾಮ ಪಂಚಾಯಿತಿ ನೂತನ ಕಟ್ಟಡ ಉದ್ಘಾಟನೆ

ಇಟಗಿ (ಬೆಳಗಾವಿ): ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಬೆಳಗಾವಿ, ತಾಲೂಕಾ ಪಂಚಾಯತ್ ಖಾನಾಪುರ ಹಾಗೂ ಗ್ರಾಮ ಪಂಚಾಯತ್ ಇಟಗಿ ಇವರ ಸಂಯುಕ್ತ ಆಶ್ರಯ ಹಾಗೂ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ನಿರ್ಮಿಸಲಾದ ಗ್ರಾಮ ಪಂಚಾಯತ್ ಇಟಗಿಯ ನೂತನ ಕಟ್ಟಡ ಹಾಗೂ ಸಭಾ ಭವನವನ್ನು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಶುಕ್ರವಾರ ಉದ್ಘಾಟಿಸಿದರು.

ಸರಕಾರದಿಂದ ಬಿಡುಗಡೆಯಾಗುವ ಹಣ ಮಧ್ಯವರ್ತಿಗಳಿಲ್ಲದೆ ನೇರವಾಗಿ ಗ್ರಾಮ ಪಂಚಾಯಿತಿಗೆ ತಲುಪಿದಾಗ ಯಾವುದೇ ಯೋಜನೆ ಯಶಸ್ವಿಯಾಗುತ್ತದೆ. ಗ್ರಾಮ ಪಂಚಾಯಿತಿಗಳು ವಿಕೇಂದ್ರೀಕರಣ ವ್ಯವಸ್ಥೆಯ ಅತ್ಯಂತ ಪ್ರಮುಖ ಹಂತವಾಗಿದ್ದು, ಇದಕ್ಕೆ ಬಲತುಂಬಿದಾಗ ಪ್ರಜಾಪ್ರಭುತ್ವ ಅರ್ಥಪೂರ್ಣವಾಗುತ್ತದೆ. ಯಾವುದೇ ಊರಿನ ಶಾಲೆ ಮತ್ತು ಪಂಚಾಯಿತಿ ಸ್ಥಿತಿ ಗತಿ ನೋಡಿದರೆ ಆ ಊರಿನ ಸ್ಥಿತಿ ಗೊತ್ತಾಗುತ್ತದೆ. ಹಾಗಾಗಿ ಇವೆರಡನ್ನು ಉತ್ತಮಗೊಳಿಸುವುದು ನಮ್ಮೆಲ್ಲರ ಜವಾಬ್ದಾರಿ. ಎಲ್ಲರೂ ಸೇರಿ ಗ್ರಾಮದ ಅಭಿವೃದ್ಧಿ ಮಾಡೋಣ, ಒಳ್ಳೆಯ ಸಮಾಜ ನಿರ್ಮಾಣ ಮಾಡೋಣ ಎಂದು ಚನ್ನರಾಜ ಹಟ್ಟಿಹೊಳಿ ಹೇಳಿದರು.

ಕಾರ್ಯಕ್ರಮದಲ್ಲಿ ಚನ್ನಮ್ಮನ ಕಿತ್ತೂರು ವಿರಕ್ತಮಠದ ಪರಮಪೂಜ್ಯ ಶ್ರೀ ಮಡಿವಾಳ ರಾಜಯೋಗಿಂದ್ರ ಮಹಾಸ್ವಾಮಿಗಳು, ನಂದಗಡ ಹಾಗೂ ಇಟಗಿ ವಿರಕ್ತಮಠದ ಶ್ರೀ ಚನ್ನವೀರ ದೇವರು, ಅವರೊಳ್ಳಿ ಬಿಳಕಿಂ–ಯ ರುದ್ರಸ್ವಾಮಿ ಮಠದ ಶ್ರೀ ಚನ್ನಬಸವ ದೇವರು, ಶಾಸಕರಾದ ವಿಠ್ಠಲ ಹಲಗೇಕರ್, ಕಾರ್ಯ ನಿರ್ವಾಹಕ ಅಧಿಕಾರಿಗಳಾದ ರಮೇಶ ಮೇತ್ರಿ, ವಿಜಯಕುಮಾರ್ ಕೋತಿನ, ರೂಪಾಲಿ ಬಡಕುಂದ್ರಿ, ವಿರೇಶ ಸಜ್ಜನ, ರೋಹಿಣಿ ಬಾ ಪಾಟೀಲ, ಗ್ರಾಮ ಪಂಚಾಯತ್ ಅಧ್ಯಕ್ಷರಾದ ರುದ್ರಪ್ಪ ತುರಮುರಿ, ಉಪಾಧ್ಯಕ್ಷರಾದ ರಾಜಶ್ರೀ ಹುಣಶೀಕಟ್ಟಿ ಹಾಗೂ ಸರ್ವ ಸದಸ್ಯರು, ಗ್ರಾಮದ ಗುರು ಹಿರಿಯರು, ಸುತ್ತಮುತ್ತಲಿನ ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

ಹಿಂದುಸನಾತನ ಸಂಸ್ಕೃತಿ ರಕ್ಷಣೆಗೆ ಸಂತ ಸಮಾವೇಶ: ಮಾದುಲಿಂಗ

ಜಮಖಂಡಿ: ಹಿಂದು ಸನಾತನ ಸಂಸ್ಕೃತಿ ರಕ್ಷಣೆಗಾಗಿ ಹಿಂದು ವಿಶ್ವಪರಿಷತ್ ಮತ್ತು ಭಜರಂಗದಳ ಆಶ್ರಯದಲ್ಲಿ ಜಿಲ್ಲಾಮಟ್ಟದ ಸಂತ ಸಮಾವೇಶವನ್ನು ಜಮಖಂಡಿ ನಗರದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜಕನೂರಿನ ಮಾದಣ್ಣ ಮದಗೊಂಡ ಸಿದ್ದಮಠದ ಮಾದುಲಿಂಗ ಮಹಾರಾಜರು ಹೇಳಿದರು.

ನಗರದ ನಮಸ್ಕಾರ ಮಂಡಳಿ ಆವರಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ತಾಲೂಕಿನ ಹುಲ್ಯಾಳ ಗ್ರಾಮದ ಶ್ರೀಗುರುದೇಶವಾಶ್ರಮದಲ್ಲಿ ಜೂನ 21 ರಂದು ಸಂತ ಸಮಾವೇಶ ಹಮ್ಮಿಕೊಂಡಿದ್ದು ಅಂದು ಬೆಳಿಗ್ಗೆ 10.30 ರಿಂದ 1.30 ವರಗೆ ಎರಡು ಚಿಂತನಗೋಷ್ಠಿಗಳು ನಡೆಯಲಿವೆ. ಇದರಲ್ಲಿ ಕೇವಲ ನಮ್ಮ ಜಿಲ್ಲೆಯ 200 ಜನ ಸಂತರು ಮಾತ್ರ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ. ಮದ್ಯಾಹ್ನ ನಗರದ ಅನಂತರಾವ ಸಾಬಡೆ ವೃತ್ತ ಹೊಕ್ಕಳಬಾವಿ ಮೈದಾನದಿಂದ ಬಸವಭವನದವರೆಗೆ ಶೋಭಾಯಾತ್ರೆ ನಡೆಯಲಿದೆ. ಸಂತರ ಜೊತೆಯಾಗಿ 1008 ಮಹಿಳೆಯರ ಕುಂಭಮೇಳದಲ್ಲಿ ಎಲ್ಲ ಸಮಾಜದ ಪ್ರಮುಖರು ಭಾಗವಹಿಸಲಿದ್ದಾರೆ ಎಂದರು. ಶೋಭಾಯಾತ್ರೆ ನಂತರ ಬಸವಭವನದಲ್ಲಿ ಸಮಾರೋಪ ಸಮಾರಂಭ ನಡೆಯಲಿದ್ದು ರಾಷ್ಟ್ರಸಂತರಾದ ಉಡುಪಿ ಪೇಜಾವರಮಠದ ಶ್ರೀ ವಿಶ್ವಪ್ರಸನ್ನತೀರ್ಥ–ರ ಶ್ರೀಪಾದಂಗಳವರು, ಮಹರಾಷ್ಟ್ರದ ಕನ್ಹೇರಿ ಕಾಡಸಿದ್ದೇಶ್ವರಮಠದ ಶ್ರೀ ಅದೃಷ್ಯಕಾಡಸಿದ್ದೇಶ್ವರ ಸ್ವಾಮಿಗಳು ಸಾನಿಧ್ಯ ವಹಿಸಲಿದ್ದಾರೆ. ಹಿಂದು ವಿಶ್ವ ಪರಿಷತದ ದಕ್ಷೇತ್ರೀಯ ಸಂಪರ್ಕ ಪ್ರಮುಖ ಜಿ.ಬಸವರಾಜ, ಪ್ರಾಂತ ಅಧ್ಯಕ್ಷ ಲಿಂಗರಾಜ ಅಪ್ಪಾಜಿ, ಪ್ರಾಂತ ಕಾರ್ಯದರ್ಶಿ ಶಿವಕುಮಾರ ಚೋಳಶೆಟ್ಟಿ, ಪ್ರಾಂತ ಪ್ರಮುಖ ವಂಕಟೇಶ ದೇಶಪಾಂಡೆ, ತಾಲೂಕಾ ಗೌರವಾಧ್ಯಕ್ಷ ಮಾದುಲಿಂಗ ಮಹಾರಾಜರು, ಆರ್.ಎಸ್.ಎಸ್. ವಿಭಾಗ ಕಾರ್ಯವಾಹಕ ವಿಠ್ಠಲ ಕುಲಕರ್ಣಿ ಸಹಿತ ಹಲವರು ಆಗಮಿಸಲಿದ್ದಾರೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ವಿಎಚ್‌ಪಿ ಜಿಲ್ಲಾ ಉಪಾಧ್ಯಕ್ಷ ಉಮೇಶ ಸಿದರೆಡ್ಡಿ, ಆಲಗೂರು ಧರಿದೇವರ ಮಠದ ಶಾಂತ ಮೂರ್ತಿ ಲಕ್ಷ್ಮಣಮುತ್ಯಾ, ಸರ್ವೋತ್ತಮ ಗಲಗಲಿ, ಹಣಮಂತ ಗಿರಡ್ಡಿ, ಕರೆಪ್ಪಾ ಬೀಳಗಿ, ಸಾಗರ ಜಂಬಗಿ, ಗಿರೀಶ ಕೆಂಗನಾಳ, ಮುತ್ತು ಲಕ್ಕನಗೌಡರ, ನಂದಕಿಶೋರ ಮಂತ್ರಿ, ತುಕಾರಾಮ ಅಸುಗಡೆ ಸಹಿತ ಹಲವರು ಇದ್ದರು.

ವಿಶ್ವ ಪರಿಸರ ದಿನವನ್ನು ಹೇಗೆ ಆಚರಿಸುವುದು?

ನಮ್ಮ ಗ್ರಹವನ್ನು ಭವಿಷ್ಯದ ಪೀಳಿಗೆಗಾಗಿ ರಕ್ಷಿಸಲು ಜಾಗತಿಕವಾಗಿ ಪ್ರತಿ ವರ್ಷ ಜೂನ್ 5 ರಂದು ವಿಶ್ವ ಪರಿಸರ ದಿನವನ್ನಾಗಿ ಭಾರತ ಸೇರಿದಂತೆ ವಿಶ್ವಾಧ್ಯಂತ 143 ದೇಶಗಳು ಆಚರಿಸಲಾಗುತ್ತದೆ.

ಪರಿಸರವು ಈ ಗ್ರಹದಲ್ಲಿ ಮಾನವನಿಗೆ ದೊರೆತ ಅತ್ಯಂತ ಅಮೂಲ್ಯ ಕೊಡುಗೆಯಾಗಿದೆ. ನಾವು ಇಂದು ಪರಿಸರದ ಮಹತ್ವದ ಬಗ್ಗೆ ಗಮನಹರಿಸುವದು ಅವಶ್ಯವಾಗಿದೆ. ಮಾನವನ ಚಟುವಟಿಕೆಗಳಿಂದ ಉಂಟಾಗುವ ಹೆಚ್ಚಿನ ಹಾನಿಯನ್ನು ತಡೆಗಟ್ಟುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಈ ನಿಟ್ಟಿನಲ್ಲಿ ಬಿಸಾಡಬಹುದಾದ ಪ್ಲಾಸ್ಟಿಕ್ ವಸ್ತುಗಳ ಬದಲಿಗೆ ಮರುಬಳಕೆ ಚೀಲಗಳು, ಬಾಟಲಿಗಳು ಡಬ್ಬಿಗಳನ್ನು ಮತ್ತು ಇತರ ಸಾಮಗ್ರಿಗಳನ್ನು ಬಳಸಬೇಕು.

ಪ್ಲಾಸ್ಟಿಕ್ ಬಳಕೆ ಬದಲಿಗೆ ಹತ್ತಿ ಬಟ್ಟೆ, ಸೆಣಬು, ಕಾಗದ, ರಟ್ಟು,ಕಟ್ಟಿಗೆ, ಬಿದಿರು ಅಲುಮಿನಿಯಂ, ಉಕ್ಕು ಇತ್ಯಾದಿ ಪರ್ಯಾಯ ವಸ್ತುಗಳನ್ನು ಬಳಸುವುದರಿಂದ ಪರಿಸರಕ್ಕಾಗುವ ಹಾನಿಯನ್ನು ತಪ್ಪಿಸಬಹುದು.

ಪ್ಲಾಸ್ಟಿಕ್ ಎಂಬ ಪೆಡಂಭೂತ ಪರಿಸರಕ್ಕೆ ಪ್ರಮುಖ ಕಂಟಕವಾಗಿ ಪರಿಣಮಿಸಿದೆ. ಪ್ಲಾಸ್ಟಿಕ್ ನರ್ಮೂಲನೆಗಾಗಿ ಹಲವಾರು ಯೋಜನೆಗಳನ್ನು ಸರಕಾರಗಳು ಜಾರಿಗೆ ತಂದಿದ್ದರೂ ಕೂಡ ಪ್ಲಾಸ್ಟಿಕ್ಗೆ ಸಂಪರ್ಣವಾಗಿ ಈಗ ತಿಲಾಂಜಲಿಯನ್ನಿಯುವ ಸಮಯ ಬಂದಿದೆ.. ಪ್ಲಾಸ್ಟಿಕ್ ಗಳನ್ನು ನೈರ್ಗಿಕ ಅನಿಲ, ಕಲ್ಲಿದ್ದಲು, ಕಚ್ಚಾ ತೈಲಗಳಿಂದ ತಯಾ–ರಿಸಲಾಗುತ್ತದೆ. ಇವುಗಳ ಬದಲಿಗೆ ಸಸ್ಯಗಳು ಅಥವಾ ಜೈವಿಕ ವಸ್ತುಗಳಿಂದ ಮಾಡಿದ ಪರ್ಯಾಯ ವಸ್ತುಗಳನ್ನು ತಯಾ–ರಿಸಬಹುದು. ಅದರಂತೆ ಏಕ ವಸ್ತು (ಒಠ–ಟಠ–ಟಚಿಣಜಡಿಬಿಟ) ನಿಂದ ತಯಾ–ರಿಸಿದ ಪ್ಲಾಸ್ಟಿಕ್ ಕೂಡ ಬಳಸಬಹುದು. ಏಕೆಂದರೆ ಅದನ್ನು ಸುಲಭವಾಗಿ ಸಂಸ್ಕರಿಸಿ ಮರುಬಳಕೆ ಮಾಡಬಹುದು. ಇದರಲ್ಲಿ ಪಾಲಿಪ್ರೊಪಿಲೀನ್ಟೆರೆಫ್ಥಲೇಟ್ (ಪಿಇಟಿ), ಪಾಲಿಪ್ರೊಪಿಲೀನ್ (ಪಿಪಿ) ಮತ್ತು ಹೈಡೆನ್ಸಿಟಿಪಾಲಿಥಿಲೀನ್ (ಎಚ್ಡಿಪಿಇ) ಸೇರಿವೆ. ಪಿಇಟಿ ಉಪಯೋಗಿಸಿ, ನೀರಿನ ಬಾಟಲಿಗಳು ಮತ್ತು ಮರುಬಳಕೆ ಮಾಡಬಹುದಾದ ಇತರ ಪಾತ್ರೆಗಳನ್ನು ತಯಾರಿಸಬಹುದು. ಏಕ ಬಳಕೆ (ಖುಟಿರಟಜ ಗಜ) ಪ್ಲಾಸ್ಟಿಕ್ ನೂರಾರು ರ್ಷಗಳವರೆಗೆ ನಾಶವಾಗದೆ ಪರಿಸರದಲ್ಲಿ ಅಸ್ತಿತ್ವದಲ್ಲಿರುತ್ತದೆ. ಇದನ್ನು ಹಂತ ಹಂತವಾಗಿ ನಿಷೇಧಿಸಿ, ಏಕವಸ್ತುವಿನಿಂದ ತಯಾರಿಸಿದ ಪ್ಲಾಸ್ಟಿಕ್ನ್ನು ಬಳಸಬಹುದಾಗಿದೆ.

ಜೈವಿಕ ವಿಘಟನೆಯ ಪ್ಲಾಸ್ಟಿಕ್ಗಳು ಏಕಕೋಶ ಜೀವಿ ಶಿಲೀಂದ್ರಗಳಂತಹ ಜೀವಿಗಳ ಮೂಲಕ ನೈರ್ಗಿಕವಾಗಿ ವಿಘಟಿಸುತ್ತದೆ. ಇವುಗಳಲ್ಲಿ ಪಾಲಿಲ್ಯಾಕ್ಟಿಕ್ ಆಮ್ಲ (ಕಐಂ), ಪಾಲಿಹೈಡ್ರಾಕ್ಸಿಅಲ್ಕನೋಯೇಟ್ಗಳು (ಕಳಂಂ) ಮತ್ತು ಸೆಲ್ಯುಲೋಸ್ಸೇರಿವೆ. ಕಐಂ ಅನ್ನು ಸಾಮಾನ್ಯವಾಗಿ ಸಸ್ಯ ಮೂಲಗಳಿಂದ ತಯಾರಿಸಲಾಗುತ್ತದೆ. ಇದನ್ನು ಪ್ಯಾಕೇ–ಜಿಂಗ್ ಮತ್ತು ಜವಳಿ ಸೇರಿದಂತೆ ವಿವಿಧ ಅನ್ವಯಿಕೆಗಳಲ್ಲಿ ಬಳಸಲಾಗುತ್ತದೆ. ಈರೀತಿಯ ಪ್ಲಾಸ್ಟಿಕ ನಿರ್ದಿಷ್ಟ ಪರಿಸ್ಥಿತಿಗಳಲ್ಲಿ ನೀರು, ಇಂಗಾಲದಡೈಆಕ್ಸೈಡ ಮತ್ತು ಜೀವರಾಶಿಯಾಗಿ ವಿಘಟನೆಯಾಗುತ್ತದೆ.

ಆದರೆ ಪ್ಲಾಸ್ಟಿಕ್ ಗಳು ಸಂಶ್ಲೇಷಿತ ಅಥ–'ವಾ ಅರೆ–ಸಂಶ್ಲೇಷಿತ ವಸ್ತುಗಳಾಗಿದ್ದು ಜೈವಿಕವಾಗಿ ವಿಕಟಿತವಾಗುವುದಿಲ್ಲ. ಅವು ವಿಘಟಿತವಾಗದೆ ನೂರಾರು ರ್ಷಗಳ ಕಾಲ ಪರಿಸರದಲ್ಲಿ ಅಸ್ತಿತ್ವದಲ್ಲಿ ಇರುತ್ತವೆ. ಬಳಸಿ ಬೀಸಾಡಿದ ಪ್ಲಾಸ್ಟಿಕ್ ಬಾಟಲಿ, ಚ

ಶಾಲೆ ಮಕ್ಕಳಿಗೆ ನೋಟ್ ಬುಕ್ ಪೆನ್ನ್ ವಿತರಣೆ ಮಾಡುವ ಮೂಲಕ ಆಚರಣೆ

ಮುದ್ದೇಬಿಹಾಳ: ತಾಲ್ಲೂಕಿನ ಹಿರೇಮುರಾಳ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸಮಾಜ ಸೇವಕ, ಜೆಡಿ–ಎಸ್ ಹಿರಿಯ ಮುಖಂಡ ಬಸನಗೌಡ ಬಿ ಪಾಟೀಲ(ಮುರಾಳ) ಅವರು 65 ನೇ ವರ್ಷದ ಹುಟ್ಟು ಹಬ್ಬದ ಅಂಗವಾಗಿ ತಮ್ಮ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಸರಕಾರಿ ಶಾಲಾ ಮಕ್ಕಳಿಗೆ ನೋಟ್ ಪುಸ್ತಕಗಳನ್ನು ಪೆನ್ನು ಗಳನ್ನು ವಿತ–ರಿಸುವುದರ ಮೂಲಕ ಹುಟ್ಟು ಹಬ್ಬವನ್ನು ಆಚರಿಸಿಕೊಂಡರು.

ಈ ಸಂದರ್ಭದಲ್ಲಿ ಸಮೂಹ ಸಂಪನ್ಮೂಲ ವ್ಯಕ್ತಿಗಳಾದ ಎಚ್ ಎನ್ ಭೋವಿ ಹಾಗೂ ಊರಿನ ಹಿರಿಯರಾದ ನಾಗರಬೆಟ್ಟ, ಕಾರ್ಯಕ್ರಮವನ್ನು ಉದ್ದೇಶಿಸಿ ಎಸ್ ಎಸ್ ಸಜ್ಜನ್ ರವರು ಪ್ರಸ್ತಾವಿಕ ನುಡಿಗಳನ್ನು ನುಡಿದರು,

ಶಾಲೆಯ ದೈಹಿಕ ಶಿಕ್ಷಕರಾದ ಎಸ್ ಜಿ ಪಾಟೀಲ, ಗುರುಗಳು ಸ್ವಾಗತಿಸಿದರು. ಕಾರ್ಯಕ್ರಮವನ್ನು ಉದ್ದೇಶಿಸಿ ಶಾಲೆಯಮುಖ್ಯ ಗುರುಮಾತೆಯರಾದ ಶ್ರೀಮತಿ ಎನ್ ಎಂ ಕಣಕಾಲವಿದ್ಯೆಯ ಮಹತ್ವವನ್ನು ತಿಳಿಸಿಕೊಡುತ್ತಾ ನೋಟ್ ಪುಸ್ತಕಗಳನ್ನು ವಿತರಿಸಿದ ಧಾನಿಗಳಿಗೆ ಅಭಿನಂದನೆಗಳನ್ನು ಸಲ್ಲಿಸಿದರು ತದನಂತರ ಮಾತನಾಡಿದರು.

ಎಚ್ ಎನ್ ಭೋವಿ ಗುರುಗಳು ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು. ಈ ಕಾರ್ಯಕ್ರಮವನ್ನು ಮಹಾಂತೇಶ ಪಾಟೀಲ ನಿರೂಪಿಸಿದರು. ಶಾಲೆಯ ಶಿಕ್ಷಕಿಯರಾದ ಶ್ರೀಮತಿ ಆಯ್ ಆಯ್ ಮುರುಡಿ ,ಶ್ರೀಮತಿ ಡಿ ವಾಯ್ ಮದರಿ, ಶ್ರೀಮತಿ ಸಿ ಕೆ ರಾಠೋಡ್, ಶ್ರೀಮತಿ ಎಸ್ ಎಸ್ ಪ್ಯಾಟಿ, ಸರಕಾರಿ ಶಾಲಾ ಮಕ್ಕಳು ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

ಮುಸ್ಲಿಂ ಧಾರ್ಮಿಕ ಆಸ್ತಿಗಳಲ್ಲಿ ಹಿಂದುಗಳ ಹಕ್ಕಿದೆ: ತೊಗಾಡಿಯಾ

ಜಮಖಂಡಿ: ಕೇವಲ ಹಿಂದು ದೇವಾಲಯಗಳು ಮಾತ್ರವಲ್ಲದೇ ಮುಸ್ಲಿಂ ಸಮುದಾಯದ ಖಬರಸ್ಥಾನ್, ಮಕ್ಕಾ ಮಸೀದಿಗಳು ಮತ್ತು ಧಾರ್ಮಿಕ ಆಸ್ತಿಗಳಲ್ಲಿ ಕೂಡ ಹಿಂದೂಗಳ ಹಕ್ಕಿದೆ ಎಂದು ರಾಷ್ಟ್ರೀಯ ಹಿಂದು ನಾಯಕ ಡಾ.ಪ್ರವೀಣಬಾಯಿ ತೊಗಾಡಿಯಾ ಹೇಳಿದರು. ನಗರದ ಎಸ್.ಆರ್.ಎ. ಕ್ಲಬ್ ಸಭಾಭವನದಲ್ಲಿ ಹಿಂದು ಕಾರ್ಯಕರ್ತರೊಂದಿಗೆ ಹಮ್ಮಿಕೊಂಡಿದ್ದ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸೃಷ್ಟಿಯನ್ನು ಸೃಷ್ಟಿಸಿದ ಬ್ರಹ್ಮ ಸೃಷ್ಟಿಯ ಸಹಿತ ಸ್ತ್ರೀ–ಪುರುಷ ಎಂಬ ಅಂಶವನ್ನು ಹುಟ್ಟಿ ಹಾಕಿದ ದಿನದಿಂದ ನಮ್ಮ ಪೂರ್ವಜರೆಲ್ಲ ಪ್ರತಿಯೊಬ್ಬರು ಹಿಂದುಗಳಾಗಿ ಜೀವನ ಸಾಗಿಸಿದ್ದಾರೆ ಎಂದರು.

ಸೃಷ್ಟಿ ಹುಟ್ಟಿ ಕೋಟಿ ವರ್ಷಗಳು ಕಳೆದರೂ ಭಗವಂತ ಹಿಂದೂಗಳನ್ನು ಸೃಷ್ಟಿ ಮಾಡಿ ಭೂಮಿಯ ಮೇಲೆ ಬಿಟ್ಟರು. ನಮ್ಮ ಹಿಂದುದೇಶ ಸುಖ, ಶಾಂತಿ, ಧನ, ದಾನ್ಯ, ಸಂಪತ್ತು, ಸಮೃದ್ಧಿ ಹೊಂದಿದ ಸುಸಂಸ್ಕೃತ ಹಿಂದು ಧರ್ಮ ನಮ್ಮದು. ಅಂತಹ ಸನಾತನ ಹಿಂದು ಧರ್ಮದಲ್ಲಿ ಹಲವರು ಧರ್ಮದ್ರೋಹಿಗಳಿದ್ದು, ಇಂದು ಹಿಂದು ಧರ್ಮವು ಅಳಿವಿನಂಚಿನಲ್ಲಿದೆ ಎಂದರು. ಹಿಂದುಗಳು ಸರಾಸರಿ ಅನುಪಾತ 1:7 ಇದ್ದರೆ ಮುಸ್ಲಿಂರ ಸಂಖ್ಯೆ 2:4 ಇದೆ. ಹಿಂದುಗಳ ಸಂಖ್ಯೆ ಭಾರತದಲ್ಲಿ ಕಡಿಮೆಯಾಗುತ್ತಿದೆ. ಕಳೆದ 25 ವರ್ಷದಿಂದ ಗುಜರಾತನಿಂದ ಹಿಂದುಗಳ ಒಗ್ಗೂಡಿಸುವ ಕೆಲಸ ಆರಂಭಿಸಲಾಗಿದೆ. ಇಂದು ರಾಮ ಮಂದಿರ ನಿರ್ಮಾಣದವರೆಗೆ, ಕುಂಭಮೇಳದವರೆಗೆ ನಾನು ಹಿಂದುಗಳನ್ನು ಸಂಘಟಿಸುತ್ತಿದ್ದೇನೆ. ಮುಸ್ಲಿಮರಿಗೆ ಕಾನೂನು ಜಾರಿ ಮಾಡಿ, ಬಾಂಗ್ಲಾ ವಲಸಿಗರನ್ನು ಹೊರದಬ್ಬಿಸಿ ಭಾರತ ದೇಶದಲ್ಲಿ ಜನಸಂಖ್ಯಾ ನಿಯಂತ್ರಣ ಕಾಯಿದೆ ಬರಬೇಕು. ಹಿಂದು ರಾಷ್ಟ್ರ ಹಿಂದು ಧರ್ಮ ಉಳಿಸಲು ಹಿಂದೂಗಳ ಒಂದಾಗಬೇಕಿದೆ. ಹಿಂದುಗಳಿಂದ ಬಲಿಷ್ಠವಾದ ಸಂಘಟಣೆಯಾಗಬೇಕಾಗಿದೆ ಎಂದರು.

ಸಂವಾದ ವೇದಿಕೆಯಲ್ಲಿ ಹಿಂದು ವಿಶ್ವ ಪರಿಷತ್ ರಾಜ್ಯ ಮುಖಂಡ ರಮೇಶ ಕುಲಕರ್ಣಿ, ಹುಲ್ಯಾಳದ ದುಂಡಯ್ಯ ಶ್ರೀಗಳು, ಸುರೇಶ ಮೀಶಿ, ನಿಖಿಲ ಮಹಾಬಳಶೆಟ್ಟಿ, ಉಮೇಶ ಆಲಮೇಲ್ಕರ, ರಾಯಬಾ ಜಾಧವ ಸಹಿತ ಹಲವರು ಇದ್ದರು.

ಸಕ್ರೀಯ ಯುವಕ ಸಂಘಗಳಿಗೆ ಕ್ರೀಡಾ ಕಿಟ್; ಆಸಕ್ತರಿಂದ ಅರ್ಜ ಆಹ್ವಾನ

ಧಾರವಾಡ : 2025–26 ನೇ ಸಾಲಿನಲ್ಲಿ ಗ್ರಾಮೀಣ ಯುವ ಜನತೆಯು ಆರೋಗ್ಯಕರ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಲು ಸಹಾಯಕವಾಗುವ ವಾತಾವರಣವನ್ನು ಸೃಜಿಸಲು ಯುವ ಚೈತನ್ಯ ಕಾರ್ಯಕ್ರಮದಡಿ ಜಿಲ್ಲೆಯ ಆಯ್ದ ಕ್ರೀಯಾಶೀಲವುಳ್ಳ ಸಕ್ರೀಯವಾಗಿರುವ ಯುವಕ ಸಂಘಗಳಿಗೆ ಕ್ರೀಡಾ ಕಿಟ್‌ಗಳನ್ನು ಸರಬರಾಜು ಮಾಡಲು ಉದ್ದೇಶಿಸಲಾಗಿದೆ. 2024–25 ನೇ ಸಾಲಿನಲ್ಲಿ ಆಯೋಜಿಸಿದ ಕ್ರೀಡಾಕೂಟ, ಕಾರ್ಯಚಟುವಟಿಕೆ, ಸಮಾಜ ಸೇವೆ ಹಾಗೂ ಇನ್ನಿತರ ಚಟುವಟಿಕೆಗಳ ಮಾಹಿತಿಯನ್ನು ಕಚೇರಿಗೆ ಜುಲೈ 18, 2025 ರೊಳಗಾಗಿ ಸಲ್ಲಿಸಬೇಕು. ಅದರಂತೆ ಸದರಿ ಯುವಕ ಸಂಘವು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಮಾನ್ಯತೆ ಪಡೆದ ಹಾಗೂ ಕ್ರೀಯಾಶೀಲವುಳ್ಳ ಸಂಘವಾಗಿರಬೇಕು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0836–2447424 ಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜೂನ್.23 ರಂದು ಅಪ್ರೆಂಟಿಸ್ ಶಿಪ್ (PMNAM) ಮೇಳ

ಬೆಳಗಾವಿ, : ಪ್ರಧಾನ ಮಂತ್ರಿಗಳ ರಾಷ್ಟ್ರೀಯ ಅಪ್ರೆಂಟಿಸ್ ಶಿಪ್ (PMNAM) ಮೇಳವನ್ನು ಜೂನ್ 23, 2025 ರಂದು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಪುರುಷ) ಬೆಳಗಾವಿಯಲ್ಲಿ ಬೆಳಿಗ್ಗೆ 9. 30 ರಿಂದ ಸಂಜೆ 5 ಗಂಟೆಯವರೆಗೆ ಆಯೋಜಿಸಲಾಗಿದೆ.

ಜಿಲ್ಲೆಯಲ್ಲಿರುವ ಐ.ಟಿ.ಐ, (ಬಿ&ಇ)–1, ಡಿಪ್ಲೋಮಾ ಪಾಸಾದ ಅಭ್ಯರ್ಥಿಗಳು ಆನ್ ಲೈನ್ ವೆಬ್ ಸೈಟ್: **WWW.apprenticeship-india.gov.in/login** ಮೂಲಕ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ : 7349574586, 9845843248, 9448017808, 9844549050 ಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಉದ್ಯಮಭಾಗದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ(ಪುರುಷ), ಪ್ರಾಚಾರ್ಯರು (ದರ್ಜೆ–1) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಳೆ ಮತ್ತು ಹಾನಿ ವಿವರ

ಕಾರವಾರ, : ಜಿಲ್ಲೆಯಲ್ಲಿ ಕಳೆದ 24 ಗಂಟೆಗಳಲ್ಲಿ, ಅಂಕೋಲಾದಲ್ಲಿ 26.5 ಮಿಮೀ, ಭಟ್ಕಳದಲ್ಲಿ 18.5 ಹಳಿಯಾಳ 3.5 ಹೊನ್ನಾವರ 28.3 ಕಾರವಾರ 27.8, ಕುಮಟಾ 31.1 ಮುಂಡಗೋಡ 15.2, ಸಿದ್ದಾಪುರ 53.3, ಶಿರಸಿ 31.7, ಸೂಪಾ 19.2, ಯಲ್ಲಾಪುರ 16.9, ದಾಂಡೇಲಿಯಲ್ಲಿ 5.2 ಮಿಲಿ ಮೀಟರ್ ಮಳೆ ಸುರಿದಿದ್ದು, 6 ಮನೆಗಳಿಗೆ ಭಾಗಶ: ಹಾನಿ ಸಂಭವಿಸಿದೆ.

ಕೊನೆಯ ಕ್ಷಣದವರೆಗೂ ಜನಸೇವೆ ಬಿಡದ ಕಾಕಾ ಸಾಹೇಬ ಪಾಟೀಲ : ಚನ್ನರಾಜ ಹಟ್ಟಿಹೊಳಿ ಸ್ಮರಣೆ

ನಿಪ್ಪಾಣಿ: ಚುನಾವಣೆಯಲ್ಲಿ ಸೋಲು, ಗೆಲುವು ಸಾಮಾನ್ಯ. ಆದರೆ ಮಾಜಿ ಶಾಸಕ ಕಾಕಾಸಾಹೇಬ ಪಾಟೀಲ ಅವರು ಸಂಘಟನೆ ಮತ್ತು ಜನರ ಸೇವೆಯನ್ನು ಕೊನೆಯವರೆಗೂ ಬಿಡಲಿಲ್ಲ. ಕೊನೆಯವರೆಗೂ ಜನರ ಮಧ್ಯೆ ಇದ್ದು, ತಾವೊಬ್ಬ ಸಂಘಟನಾ ಚತುರ ಎನ್ನುವುದನ್ನು ತೋರಿಸಿದ್ದರು ಎಂದು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಹೇಳಿದರು.

ನಿಪ್ಪಾಣಿಯ ಮರಾಠಾ ಮಂಡಳದ ಸಾಂಸ್ಕೃತಿಕ ಭವನದಲ್ಲಿ ಶುಕ್ರವಾರ ನಡೆದ ಶ್ರದ್ಧಾಂಜಲಿ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಒಬ್ಬ ನಿಜವಾದ ಕಾಯಕ ಜೀವಿಯನ್ನು ನಾವು ಕಳೆದುಕೊಂಡಿದ್ದೇವೆ. ಸಾಮಾನ್ಯರಲ್ಲಿ ಸಾಮಾನ್ಯರಾಗಿದ್ದ ಕಾಕಾ ಸಾಹೇಬ ಪಾಟೀಲ ಅವರು ಮೂರು ಬಾರಿ ವಿಧಾನ ಸಭೆ ಸದಸ್ಯರಾಗಿ ಈ ಭಾಗದಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದರು.

ಅತ್ಯಂತ ಸರಳ ವ್ಯಕ್ತಿಯಾಗಿದ್ದ ಅವರು ಎಲ್ಲವನ್ನೂ ಸಕಾರಾತ್ಮಕವಾಗಿ ತೆಗೆದುಕೊಳ್ಳುವ ಗುಣವಿತ್ತು. ಏನೇ ಹೇಳಿದರೂ ಮಾಡೋಣ ಎನ್ನುತ್ತಿದ್ದರು. ಅತ್ಯಂತ ಕೆಳ ಮಟ್ಟದಿಂದ ಪಕ್ಷ ಸಂಘಟನೆ ಮಾಡುತ್ತ ಬೆಳೆದ ಅವರು, ಹಲವರನ್ನು ಬೆಳೆಸಿದ್ದರು ಎಂದು ಅವರು ಹೇಳಿದರು.

ನಿಪ್ಪಾಣಿ ಭಾಗದ ನೀರಿನ ಸಮಸ್ಯೆಗೆ ಶಾಶ್ವತವಾಗಿ ಮುಕ್ತಿ ನೀಡಿದವರು ಕಾಕಾ ಪಾಟೀಲ. ಕಾಳಮ್ಮವಾಡಿ ಜಲಾಶಯ ಒಪ್ಪಂದದ ಮೂಲಕ ನಿಪ್ಪಾಣಿಗೆ ನೀರು ಸಿಗುವಂತೆ ಮಾಡಿದರು.

ನಿಪ್ಪಾಣಿ ಮತಕ್ಷೇತ್ರ ಪುನರ್ ವಿಂಗಡಣೆ ವೇಳೆ ಕ್ಷೇತ್ರವನ್ನು ಉಳಿಸಿಕೊಳ್ಳುವಲ್ಲಿ ಅವರ ಪಾತ್ರ ಮುಖ್ಯವಾಗಿದೆ. ನಿಪ್ಪಾಣಿ ತಾಲೂಕು ಆಗುವುದಕ್ಕೆ ಕೂಡ ಸಾಕಷ್ಟು ಶ್ರಮ ಹಾಕಿದ್ದರು.

ಈ ಭಾಗದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಅತ್ಯಂತ ಗಟ್ಟಿಯಾದ ನೆಲೆ ಒದಗಿಸಿದ್ದರು. ಪಕ್ಷ ಸಂಘಟನೆಯ ವಿಷಯದಲ್ಲಿ ಅತ್ಯಂತ ಕಾಳಜಿ ಹೊಂದಿದ್ದರು. ನಮ್ಮ ಜೊತೆಗೆ ಅತ್ಯಂತ ಆತ್ಮೀಯ ಸಂಬಂಧ ಹೊಂದಿದ್ದ ಅವರು, ಕಳೆದ ಬಾರಿ ಲಕ್ಷ್ಮೀ ಹೆಬ್ಬಾಳಕರ್ ಅವರು ನಿಪ್ಪಾಣಿಗೆ ಆಗಮಿಸಿದ್ದ ವೇಳೆ ಕಚೇರಿಗೆ ಕರೆದೊಯ್ದು ಸನ್ಮಾನ ಮಾಡಿದ್ದರು. ಲಕ್ಷ್ಮೀ ಹೆಬ್ಬಾಳಕರ್ ಅವರು 2 ದಿನ ಮೊದಲು ಆಸ್ಪತ್ರೆಗೆ ಭೇಟಿ ನೀಡಿ ಶೀಘ್ರ ಗುಣಮುಖರಾಗಿ ಜನಸೇವೆಗೆ ಮರಳಲಿ ಎಂದು ಪ್ರಾರ್ಥಿಸಿದ್ದರು. ಆದರೆ ದುರಾದೃಷ್ಟ ಇಷ್ಟು ಬೇಗ ದೇವರು ಅವರನ್ನು ಕರೆಸಿಕೊಂಡಿದ್ದಾರೆ ಎಂದು ಕಂಬನಿ ಮಿಡಿದರು.

ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಅಣ್ಣ ಜಾರಕಿಹೊಳಿ, ಬುಡಾ ಅಧ್ಯಕ್ಷರಾದ ಲಕ್ಷ್ಮಣ–ರಾಜ್ ಚಿಂಗಳೆ, ವೀರಕುಮಾರ ಪಾಟೀಲ, ಸುನಿಲ ಹನಮಣ್ಣವರ, ಅಜಿತ್ ಕದಂ, ಪಂಕಜ್ ಪಾಟೀಲ ಸೇ–ರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.

ಯುದ್ಧ ಸಂತ್ರಸ್ಥರು ಹಾಗೂ ಮಾಜಿ ಸೈನಿಕರ ಮಕ್ಕಳಿಂದ ಅರ್ಜ ಆಹ್ವಾನ

ಬೆಳಗಾವಿ, : ಬೆಳಗಾವಿ ನಗರದ ರೈಲು ನಿಲ್ದಾಣದ ಎದು–ರಿನ ಹಾಗೂ ಅಥಣಿಯಲ್ಲಿರುವ ಮಿಲಿಟರಿ ಬಾಲಕರ ವಸತಿ ನಿಲಯಕ್ಕೆ ಸನ್ 2025–2026ನೇ ಶೈಕ್ಷಣಿಕ ವರ್ಷಕ್ಕೆ ಯುದ್ಧ ಸಂತ್ರಸ್ಥರು ಹಾಗೂ ಮಾಜಿ ಸೈನಿಕರ ಮಕ್ಕಳಿಂದ ಪ್ರವೇಶಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಬೆಳಗಾವಿ ಹಾಗೂ ಅಥಣಿ ನಗರದ ಶೈಕ್ಷಣಿಕ ಸಂಸ್ಥೆಗಳಲ್ಲಿ 5ನೇ ತರಗತಿಯಿಂದ ಪಿಯುಸಿ, ಡಿಪ್ಲೋಮಾ ಹಾಗೂ ಐಟಿಐದಲ್ಲಿ ವ್ಯಾಸಾಂಗಕ್ಕಾಗಿ ಪ್ರವೇಶ ಪಡೆದಿರಬೇಕು. ನಿಲಯದಲ್ಲಿ ಉಪಹಾರ, ಊಟ ಹಾಗೂ ವಸತಿ ಉಚಿತವಾಗಿರುತ್ತದೆ.

ಆಸಕ್ತರು ಅರ್ಜಿಯನ್ನು ಜಂಟಿ ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಬೆಳಗಾವಿ ಇವರ ಕಾರ್ಯಾಲಯದಿಂದ ಉಚಿತವಾಗಿ ಪಡೆದು ಜೂನ್.25, 2025ರ ಒಳಗಾಗಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಬೆಳಗಾವಿ ವಿಭಾಗದ ವಿದ್ಯಾರ್ಥಿಗಳು ಮೊಬೈಲ್ ಸಂಖ್ಯೆ: 9449880818 ಗೆ ಮತ್ತು ಅಥಣಿ ವಿಭಾಗದ ವಿದ್ಯಾರ್ಥಿಗಳು ಮೊಬೈಲ್ ಸಂಖ್ಯೆ: 9592139991 ಗೆ ಸಂಪರ್ಕಿಸಬಹುದಾಗಿದೆ ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಲಯೋಗ ಸಾಧಕ ಸಪ್ತ ದಾಖಲೆಗಳ ಸರದಾರ ಡಾ॥ ಪ್ರಕಾಶ ಬ. ಬೆಲ್ಲದ

ಚಿಕ್ಕೋಡಿ ತಾಲೂಕಿನ ಕಬ್ಬೂರ ಪಟ್ಟಣದ 72 ವರ್ಷದ ಹಿರಿಯ ಜಲಯೋಗಭ್ಯಾಸಕ ಕಳೆದ 36 ವರ್ಷಗಳಿಂದ 100 ಅಡಿ ಬಾವಿಯಲ್ಲಿ ಜಲಯೋಗ ಮಾಡುತ್ತಿದ್ದಾರೆ. ಗುರುವಿನ ಮೂರ್ತಿಯನ್ನು ಸ್ಥಾಪಿಸಿಕೊಂಡು ಏಕಲವ್ಯ ಬಿಲ್ವಿದ್ಯೆಯಲ್ಲಿ ಪಾರಂಗತವಾದಂತೆ ಈ ಕಲಿಯುಗದಲ್ಲಿಯೂ ಸಹ ಗುರುವಿಲ್ಲದೆ ಏಕಲವ್ಯನಂತೆ ಜಲಯೋಗದಲ್ಲಿ ವಿದ್ಯಾ ಪಾರಂಗತರಾಗಿ ಗಮನ ಸೆಳೆದು ಇದುವರೆಗೆ ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ತಮ್ಮ ಸಾಧನೆಯಿಂದ ಪ್ರತಿಷ್ಠಿತ ಸಪ್ತ ಪ್ರಶಸ್ತಿ ಪುರಸ್ಕಾರಗಳನ್ನು ತಮ್ಮ ಮುಡಿಗೆರಿಸಿಕೊಂಡಿದ್ದಾರೆ.

ಯೋಗದ ಅರ್ಥ: ಯೋಗವು 5000 ವರ್ಷಗಳ ಇತಿಹಾಸವುಳ್ಳ ಜ್ಞಾನಭಂಡಾರ ಸಾಮಾನ್ಯವಾಗಿ ಯೋಗವೆಂದರೆ ತಿರುಗುವ, ಬಾಗುವ, ಚಾಚುವ ಮತ್ತು ಉಸಿರಾಟದ ವ್ಯಾಯಾಮವೆಂದು ಜನರು ತಿಳಿಸಿದ್ದಾರೆ. ಆದರೆ ಇವೆಲ್ಲ ಮೇಲ್ನೋಟಕ್ಕೆ ಕಂಡು ಬರುವ ಸಂಗತಿಗಳಾಗಿವೆ.

ನಿಜವಾಗಿಯೂ ಯೋಗ ಎಂದರೆ 'ವ್ಯಕ್ತಿಯ ಶಾರೀರ ಮಾನಸಿಕ ಮತ್ತು ಆಧ್ಯಾತ್ಮಿಕ ಶಕ್ತಿಯನ್ನು ಹೊರ ಹೊಮ್ಮಿಸುವ ಒಂದು ವಿಜ್ಞಾನವಾಗಿದೆ'. "ಯುಜ್ ಸಮಾದೇ" ಎಂಬ ಧಾತು ರೂಪವನ್ನು ಅನ್ವಯಿಸಿದಾಗ ಅದು 'ಮನಸ್ಸಿನ ಏಕಾಗ್ರತೆ' ಎಂಬ ಅರ್ಥವನ್ನು ನೀಡುತ್ತದೆ. "ಯುಜಿರೆ ಯೋಗ" ಎಂಬ ಧಾತು ರೂಪವನ್ನು ಅನ್ವಯಿಸಿದಾಗ ಅದು ಒಂದರಲ್ಲಿ ಇನ್ನೊಂದು ಲೀನವಾಗುವುದು ಎಂಬರ್ಥ ನೀಡುತ್ತದೆ. ಈ ಎರಡು ಭಾಗಗಳನ್ನು ಅನ್ವಯಿಸಿ ನೋಡಿದಾಗ ಯೋಗ ಎಂಬ ಶಬ್ದಕ್ಕೆ ಸಾಧಕನು ತನ್ನ ಆತ್ಮವನ್ನು ಪರಮಾತ್ಮನ ಜೊತೆ ಒಂದಾಗಿಸುವ ಆಧ್ಯಾತ್ಮಿಕ ಅಭಿಲಾಷೆಯನ್ನು ಈಡೇರಿಸಿಕೊಳ್ಳಲು ಅಗತ್ಯ ಮಾನಸಿಕ ಏಕಾಗ್ರತೆಯನ್ನು ಹೊಂದಲು ಸಹಾಯಕವಾಗುವ ಒಂದು ವೈಜ್ಞಾನಿಕ ಕಲೆ ಎಂದು ಅರ್ಥೈಸಬಹುದು. ಸಾಮಾನ್ಯವಾಗಿ ಯೋಗ ಎಂಬ ಶಬ್ದವನ್ನು ಸಂಯಮ ಎಂಬ ಅರ್ಥದಲ್ಲಿ ಬಳಸಲಾಗುತ್ತಿದೆ.

ಸಾಧಕರ ಸಾಧನೆ: ಸಾಧಕರು 19 ಏಪ್ರೀಲ್ 1953 ರಂದು ಜನಿಸಿ ಉತ್ತಮ ಶಿಕ್ಷಣ ಪಡೆದು ಬ್ಯಾಂಕಿನಲ್ಲಿ ಉತ್ತಮ ಅಧಿಕಾರಿಯಾಗಿ ಸೇವೆ ಸಲ್ಲಿಸಿ ಇಂದು ನಿವೃತ್ತಿ ಜೀವನ ನಡೆಸುತ್ತಿದ್ದಾರೆ.

ಸಾಮಾನ್ಯವಾಗಿ ನೆಲದ ಮೇಲೆಯೇ ಯೋಗಾಸನ ಮಾಡಲು ಹರಸಾಹಸ ಪಟ್ಟು ಹಿಂದೆಟು ಹಾಕುತ್ತಾರೆ. ಅಂತಹದರಲ್ಲಿ ನೀರಿನಲ್ಲಿ ವಿವಿಧ ಆಸನಗಳನ್ನು ಲೀಲಾಜಾಲವಾಗಿ ಮಾಡುತ್ತಾರೆ. ಸುಮಾರು 3 ಗಂಟೆಗೂ ಅಧಿಕ ಸಮಯ ನೀರಿನಲ್ಲಿ ತೇಲುತ್ತಾ ಯೋಗಾಸನ ಮಾಡುತ್ತಾ ನಿಜಕ್ಕೂ ಬೆರಗು ಮೂಡಿಸುತ್ತಾರೆ ಡಾ.ಪ್ರಕಾಶ ಬಸಲಿಂಗಪ್ಪ ಬೆಲ್ಲದವರು.

ಸಾಧಕರಿಂದ ಜಲಯೋಗಾಸನಗಳು:
ಜಲಯೋಗಕ್ಕಾಗಿ ತಮ್ಮ ಇಡೀ ಜೀವನವನ್ನು ಮೀಸಲಿಟ್ಟ ಇವರು ನೀರಿನಲ್ಲಿ ನೇರವಾಗಿ ನಿಲ್ಲುವ ಜಲಸ್ತಂಭ ಯೋಗ ಮಾಡುತ್ತಾರೆ. ಇದು ಸಾಕಷ್ಟು ಅಭ್ಯಾಸದ ಫಲವಾಗಿದೆ. ಇದರ ಜೊತೆಗೆ ಪರ್ವತಾಸನ, ಗರುಡಾಸನ, ವೃಕ್ಷಾಸನ, ಪದ್ಮಾಸನ, ಶವಾಸನ, ಗೋಮುಖಾಸನ, ಉತ್ಕಟಾಸನ, ಮಲ್ಯಾಸನ ಹೀಗೆ ಹಲವಾರ ಜಲ ಯೋಗಾಸನಗಳನ್ನು ಮಾಡಿ ಗಮನ ಸೆಳೆದು ಪ್ರಶಸ್ತಿ ಪುರಷ್ಕೃತರಾಗಿ ದಾಖಲೆ ನಿರ್ಮಿಸಿ ಯುವ ಪೀಳಿಗೆಗೆ ಮಾದರಿಯಾಗಿದ್ದಾರೆ.

ಬೆಳಕು ಬೀರಿದ ಮಾಧ್ಯಮಗಳು: ಹೂವಿನಲ್ಲಿ ಅಡಗಿರುವ ಸುಗಂಧದಂತೆ ಇವರು ತಮ್ಮಷ್ಟಕ್ಕೆ ತಾವೇ ಜಲಯೋಗ ಮಾಡುತ್ತಿದ್ದರು. ಯಾವುದೇ ಪ್ರಶಸ್ತಿಗಾಗಲಿ, ಸನ್ಮಾನಕ್ಕಾಗಲಿ, ಹೆಸರಿಗಾಗಲಿ, ಸಾಧನೆಗಾಗಲಿ, ಯೋಗಾಭ್ಯಾಸ ಮಾಡಿದವರಲ್ಲ. ಫಲಾಪೇಕ್ಷೆ ಇಲ್ಲದೆ ತಮ್ಮಿಷ್ಟಕ್ಕೆ ತಾವೇ ಅಸಾಧ್ಯ ಎಂಬುದನ್ನು ಸಾಧ್ಯ ಎಂದು ಸಾಧಿಸಿದರು. ಇದರಿಂದಾಗಿ ಇವರಿಗೆ ಸಾಧನೆಯ ಪ್ರಶಸ್ತಿಗಳು, ಪುರಸ್ಕಾರಗಳು, ಸನ್ಮಾನಗಳು, ಬಹುಮಾನಗಳು ತಾನಾಗಿಯೇ ಅರಸಿಕೊಂಡು ಬಂದಿವೆ.

ಡಾ. ಪ್ರಕಾಶ ರವರ ಪ್ರಮುಖ ಸಾಧನೆ ಗಮನಿಸಿದ ಪ್ರಮುಖ ಹೆಸರಾಂತ ಪತ್ರಿಕೆಗಳ ಸಂಪಾದಕರು ತಮ್

ಅಧಿಕಾರಿಗಳು ಫೀಲ್ಡ್ ಗಿಳಿದು ಕೆಲಸ ಮಾಡಿ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಖಡಕ್ ಸೂಚನೆ

ಉಡುಪಿ: ಜಿಲ್ಲೆಯಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗುತ್ತಿದ್ದು, ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಮುಂಜಾಗ್ರತೆ ಕ್ರಮಕೈಗೊಳ್ಳಲು ಅಧಿಕಾರಿಗಳು ಫೀಲ್ಡಿಗಿಳಿದು ಕೆಲಸ ಮಾಡಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರು ಹಾಗೂ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಉಡುಪಿ ಜಿಲ್ಲಾ ಪಂಚಾಯತ್ ಡಾ.ವಿ.ಎಸ್.ಆಚಾರ್ಯ ಸಭಾಂಗಣದಲ್ಲಿ ಶುಕ್ರವಾರ ನಡೆದ ತ್ರೈಮಾಸಿಕ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಚಿವರು, ಕಡಲ ಕೊರೆತ ತಡೆಗಟ್ಟುವ ಸಲುವಾಗಿ 4.50 ಕೋಟಿ ಹಣ ಬಿಡುಗಡೆಯಾಗಿದ್ದು, ಕಾಮಗಾರಿಗಳನ್ನು ತ್ವರಿತಗೊಳಿಸಬೇಕು ಎಂದರು.

ಕಾಪು ತಾಲೂಕಿನ ಹೆಜ್ಮಾಡಿಯಿಂದ ಬೈಂದೂರಿನ ಶಿರೂರುವರೆಗೆ ಕಡಲ ಕೊರೆತ ಸ್ಥಳಗಳನ್ನು ಗುರುತಿಸಿ ಸರ್ಕಾರಕ್ಕೆ ವರದಿ ಸಲ್ಲಿಸಲು ಬಂದರು ಇಲಾಖೆ ಅಧಿಕಾರಿಗಳಿಗೆ ಸಚಿವರು ಸೂಚಿಸಿದರು.

ಮಲ್ಪೆ ಬಂದರು ನಿರ್ವಹಣೆಗೆ ಕ್ರಮ

ಮಲ್ಪೆ ಬಂದರು ನಿರ್ವಹಣೆಯನ್ನು ಸೂಕ್ತ ರೀತಿಯಲ್ಲಿ ಮಾಡಬೇಕು. ಸಿಸಿಟಿವಿ ಅಳವಡಿಸಿ, ಭದ್ರತೆಯ ಜೊತೆಗೆ ಸ್ವಚ್ಛತೆಯನ್ನು ಕಾಪಾಡಬೇಕು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಬಂದರು ಇಲಾಖೆ ಅಧಿಕಾರಿಗಳು ಸೂಚನೆ ನೀಡಿದರು.

ಪ್ರವಾಸೋದ್ಯಮ ಹಾಗೂ ಕ್ರೀಡಾಭಿವೃದ್ಧಿಗೆ ಒತ್ತು

ಪ್ರವಾಸೋದ್ಯಮ ಹಾಗೂ ಕ್ರೀಡಾಭಿವೃದ್ಧಿಗೆ ವಿಶೇಷ ಕಾಳಜಿ ವಹಿಸಬೇಕು. ಜಿಲ್ಲೆಯೂ ಪ್ರಮುಖ ಪ್ರವಾಸೋದ್ಯಮ ಕೇಂದ್ರವಾಗಿ ಬೆಳೆಯಬೇಕು. ಪ್ರಾಕೃತಿಕವಾಗಿ, ನೈಸರ್ಗಿಕವಾಗಿ ಸುಂದರ ತಾಣವಾಗಿದ್ದು, ಧಾರ್ಮಿಕ ಸ್ಥಳಗಳನ್ನು ಒಳಗೊಂಡಿದೆ, ಹೆಚ್ಚು ಪ್ರವಾಸಿಗರು ಆಕರ್ಷಿಸುವಂತೆ ಮಾಡಬೇಕು. ಅನಧಿಕೃತ ಹೋಂ ಸ್ಟೇಗಳಿಗೆ ಕಡಿವಾಣ ಹಾಕಬೇಕು, ಪ್ರವಾಸಿ ತಾಣಗಳಲ್ಲಿ 18 ವರ್ಷ ಒಳಗಿನ ಮಕ್ಕಳು ಕೆಲಸ ನಿರ್ವಹಿಸದಂತೆ ನೋಡಿಕೊಳ್ಳಬೇಕು. ಪಿಪಿಪಿ ಮಾದರಿಯಲ್ಲಿ ಪ್ರವಾಸೋದ್ಯಮ ಹಾಗೂ ಕ್ರೀಡೆಯ ಅಭಿವೃದ್ಧಿಗೆ ಕ್ರಮಕೈಗೊಳ್ಳಬೇಕು ಎಂದು ಸಚಿವರು ಹೇಳಿದರು.

ಕಳಪೆ ಬಿತ್ತನೆ ಬೀಜ ವಿತರಿಸಿದರೆ ಕಠಿಣ ಕ್ರಮ

ಜಿಲ್ಲೆಯಲ್ಲಿ ರೈತರಿಗೆ ಕಳಪೆ ಬೀಜ ಸರಬರಾಜು ಮಾಡಿದ ಕಂಪನಿಯನ್ನು ಕಪ್ಪು ಪಟ್ಟಿಗೆ ಸೇರಿಸಿ, ಕಠಿಣ ಕ್ರಮ ಕೈಗೊಳ್ಳಬೇಕು. ಬೇರೆ ಜಿಲ್ಲೆಗಳಿಗೆ ಹೋಲಿಸಿದರೆ ಕೃಷಿ ಸಲಕರಣೆಗಳು ಉಡುಪಿ ಜಿಲ್ಲೆಯಲ್ಲಿ ಸರಿಯಾಗಿ ಸರಬರಾಜು ಆಗುತ್ತಿಲ್ಲ. ಇದು ಕೂಡ ಹೆಚ್ಚಾಗಬೇಕು ಎಂದರು.

ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ಸರ್ಕಾರದ ಯೋಜನೆಗಳನ್ನು ಜನರಿಗೆ ತಲುಪುವಂತೆ ಮಾಡಬೇಕು. ಹೆಚ್ಚು ಆದಾಯ ತರುವ ಹಣ್ಣುಗಳ ಬಗ್ಗೆ ಜನರಿಗೆ ಜಾಗೃತಿ ಮಾಡಿಸಬೇಕು. ಮುಂದಿನ ಸಭೆ ವೇಳೆ ಫೀಲ್ಡ್ ಗಿಳಿದು ಕೆಲಸ ಮಾಡಿದ ಬಗ್ಗೆ ಮಾಹಿತಿ ನೀಡಬೇಕು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಆದೇಶಿಸಿದರು.

ರಾಜ್ಯದಲ್ಲಿ ಕರಾವಳಿ ಭಾಗದಲ್ಲಿ ಮೀನುಗಾರಿಕೆ ಚಟುವಟಿಕೆಗಳು ಹೆಚ್ಚು ನಡೆಯುತ್ತಿವೆ. ಆದರೆ, ವಸತಿ ಯೋಜನೆಯಲ್ಲಿ ಬರೀ 25 ಮನೆಗಳನ್ನು ಮಂಜೂರು ಮಾಡಲಾಗುತ್ತಿದೆ. ಇತರ ಜಿಲ್ಲೆಗಳಿಗೂ 25 ಮನೆಗಳನ್ನು ನೀಡಲಾಗುತ್ತಿದೆ. ಈ ಸಮಸ್ಯೆಗಳನ್ನು ಪರಿಹರಿಸಲು ಕ್ರಮಕೈಗೊಳ್ಳಲಾಗುವುದು ಎಂದರು.

ರೈತರಿಗೆ ಸೂಕ್ತ ಪರಿಹಾರ ನೀಡಿ

ವಾರಾಹಿ ನೀರಾವರಿ ಕಾಮಗಾರಿಗಳನ್ನು ಕೈಗೊಳ್ಳಲು, ಐದು ವರ್ಷಗಳ ಹಿಂದೆಯೇ ಭೂಸ್ವಾಧೀನ ಆಗಿದ್ದು, ಇದುವರೆಗೂ ಪರಿಹಾರ ನೀಡಿಲ್ಲ. ಜೊತೆಗೆ ಬೆಳೆ ಬೆಳೆಯಲು ಬಿಟ್ಟಿಲ್ಲ. ಇದರಿಂದ ರೈತರಿಗೆ ತುಂಬಾ ತೊಂದರೆಯಾಗುತ್ತಿದೆ. ಮುಂದಿನ ಸಭೆ ವೇಳೆಗೆ ರೈತರಿಗೆ ಸೂಕ್ತ ಪರಿಹಾರ ನೀಡಿರಬೇಕು, ಡೀಮ್ಡ್ ಫಾರೆಸ್ಟ್ ನಲ್ಲಿ ಕಾಮಗಾರಿಗೆ ಅಗತ್ಯವಿರುವ ಭೂಮಿಗೆ ಅನುಮತಿ ನೀಡಬೇಕು ಎಂದರು.

ಇಲಾಖೆವಾರು ಮಾಹಿತಿ ಸಂಗ್ರಹಿಸಿದ ಸಚಿವರು

ಸಾರಿಗೆ, ನೀರಾವರಿ, ಪಶು ಸಂಗೋಪನೆ, ಆರೋಗ್ಯ, ಶಿಕ್ಷಣ ಸೇರಿದಂತೆ ಪ್ರತಿಯೊಂದು ಇಲಾಖೆಗಳ ಅಧಿಕಾರಿಗಳಿಂದ ಮಾಹಿತಿ ಸಂಗ್ರಹಿಸಿದ ಸಚಿವರು, ಸೂಕ್ತ ಉತ್ತರ ನೀಡದ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಪ್ರತಿ ಇಲಾಖೆಯ ಸಾಧಕ-ಭಾದಕಗಳ ಕುರಿತು ಚರ್ಚೆ ನಡೆಸಿದರು.

ಶಿಕ್ಷಣ ಇಲಾಖೆ ಅಧಿಕಾರಿಗಳನ್ನು ಅಭಿನಂದಿಸಿದ ಸಚಿವರು

2024-25ನೇ ಸಾಲಿನಲ್ಲಿ ಉಡುಪಿ ಜಿಲ್ಲೆ ಎಸ್ಎಸ್ಎಲ್ಸಿ ವಿಭಾಗದಲ್ಲಿ ರಾಜ್ಯಕ್ಕೆ ದ್ವಿತೀಯ ಹಾಗೂ ಪಿಯುಸಿಯಲ್ಲಿ ಮೊದಲ ಸ್ಥಾನ ಪಡೆಯಲು ಪ್ರಮುಖ ಪಾತ್ರ ವಹಿಸಿದ ಶಿಕ್ಷಣ ಇಲಾಖೆಯ ಅಧಿಕಾರಿಗಳನ್ನು ಸಚಿವರು ಸಭೆಯಲ್ಲಿ ಅಭಿನಂದನೆ ಸಲ್ಲಿಸಿದರು.

ಸಭೆಯಲ್ಲಿ ಶಾಸಕರಾದ ಯಶ್ಪಾಲ್ ಸುವರ್ಣ, ಕಿರಣ್ ಕುಮಾರ್ ಕೊಡ್ಗಿ, ಗುರುರಾಜ್ ಗಂಟಿಹೊಳೆ, ಗುರ್ಮೆ ಸುರೇಶ್ ಶೆಟ್ಟಿ, ವಿಧಾನ ಪರಿಷತ್ ಸದಸ್ಯರಾದ ಮಂಜುನಾಥ್ ಭಂಡಾರಿ, ಧನಂಜಯ್ ಸರ್ಜಿ, ಜಿಲ್ಲಾಧಿಕಾರಿ ಸ್ವರೂಪ ಟಿ.ಕೆ, ಜಿಲ್ಲಾ ಪಂಚಾಯತ್ ಸಿಇಒ ಪ್ರತೀಕ್ ಬಾಯಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹರಿರಾಮ್ ಶಂಕರ್, ಡಿಎಫ್ಓ ಗಣಪತಿ ಸೇರಿದಂತೆ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಜೈಲಿನಲ್ಲಿ ಸಾಹಿತ್ಯ ಕಮ್ಮಟ : ಜೈಲಿನಲ್ಲಿರುವ ಅವಧಿ ಪರಿವರ್ತನೆಗೆ ಬಳಸಿಕೊಳ್ಳಬೇಕು - ಅಧ್ಯಕ್ಷ ಎಲ್.ಎನ್.ಮುಕುಂದರಾಜ್

ಹಾವೇರಿ: ಜೈಲಿನಲ್ಲಿರುವ ಅವಧಿಯನ್ನು ಪರಿವರ್ತನೆಗೆ ಬಳಸಿಕೊಳ್ಳಬೇಕು. ಇದಕ್ಕಾಗಿ ಪುಸ್ತಕಗಳನ್ನು ಓದಿರಿ ಜೊತೆಗೆ ಅನುಭವಗಳನ್ನು ದಾಖಲಿಸಿ ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಎಲ್.ಎನ್.ಮುಕುಂದರಾಜ್ ಸಲಹೆ ನೀಡಿದರು.

ಕರ್ನಾಟಕ ಸಾಹಿತ್ಯ ಅಕಾಡೆಮಿಯು ಹಾವೇರಿ ಜಿಲ್ಲಾ ಜೈಲಿನಲ್ಲಿ ಮೂರು ದಿನಗಳವರೆಗೆ ಏರ್ಪಡಿಸಿರುವ ಕಾರಾಗೃಹವಾಸಿಗಳಿಗೆ ಸಾಹಿತ್ಯ ಕಮ್ಮಟವನ್ನು ಗುರುವಾರ ಉದ್ಘಾಟಿಸಿ ಅವರು ಮಾತನಾಡಿದರು.

ಕನ್ನಡ ಸಾಹಿತ್ಯವು ಮನುಷ್ಯರನ್ನಾಗಿ ಮಾಡುತ್ತದೆ. ಪಂಪ, ಕುಮಾರವ್ಯಾಸ, ಕನಕದಾಸ, ಕುವೆಂಪು, ಬೇಂದ್ರೆ ಮೊದಲಾದವರು ಮಾನವೀಯ ಮೌಲ್ಯಗಳನ್ನು ತಮ್ಮ ಕೃತಿಗಳ ಮೂಲಕ ಬಿತ್ತಿದರು. ಕನ್ನಡದ ಆದಿ ಕವಿ ಪಂಪ 'ಮನುಷ್ಯ ಜಾತಿ ತಾಮೊಂದೇ ವಲಂ' ಎಂದು ಸಾರಿದ ಅಂದರೆ ಮನುಷ್ಯರಾದ ನಾವೆಲ್ಲ ಒಂದು ಎಂದು ಹೇಳಿದ. ಅಂಥವರ ಕೃತಿಗಳನ್ನು ಓದುವುದರ ಮೂಲಕ ಮಾನವೀಯತೆ ಅಳವಡಿಸಿಕೊಳ್ಳಬೇಕಿದೆ ಎಂದು ಕಿವಿಮಾತು ಹೇಳಿದರು.

ಹಾವೇರಿ ಜಿಲ್ಲೆಯು ಶರೀಫ, ಸರ್ವಜ್ಞ, ಕನಕದಾಸರ ಮೂಲಕ ಪ್ರಸಿದ್ಧವಾಗಿದೆ. ಕನಕದಾಸರು ಕುಲ ಕುಲವೆಂದು ಹೊಡೆದಾಡದಿರಿ ಎಂದು 500 ವರ್ಷಗಳ ಹಿಂದೆಯೇ ಹೇಳಿದ್ದಾರೆ. ಆದರೆ ಜಾತಿ, ಧರ್ಮ, ದೇವರ ಹೆಸರಿನಲ್ಲಿ ಅಲ್ಲದೆ ಹೆಣ್ಣಿಗಾಗಿ, ಆಸ್ತಿಗಾಗಿ, ಅಧಿಕಾರಕ್ಕಾಗಿ ಜಗಳವಾಡುತ್ತೇವೆ ಎಂದು ವಿಷಾದ ವ್ಯಕ್ತಪಡಿಸಿದರು.

ಮುಖ್ಯ ಅತಿಥಿಯಾದ ಪೂರ್ವ ವಲಯದ ಐಜಿಪಿ ಡಾ.ಬಿ.ಆರ್.ರವಿಕಾಂತೇಗೌಡ ಮಾತನಾಡಿ, ಕೈದಿಗಳಿಗೆ ಸಾಹಿತ್ಯ ಕಮ್ಮಟವು ವಿಶಿಷ್ಟವಾದುದು. ಸಾಹಿತ್ಯವು ಎಲ್ಲರನ್ನೂ ತಲುಪಬೇಕೆಂಬ ಉದ್ದೇಶದ ಈ ಕಮ್ಮಟವು ಸಾರ್ಥಕವಾಗಬೇಕು. ಈಮೂಲಕ ಸಾಹಿತ್ಯದಿಂದ ಬಿಡುಗಡೆಯಾಗಬೇಕು ಜೊತೆಗೆ ಓದುವುದರಿಂದ ಸಾಹಿತ್ಯವೂ ಬಿಡುಗಡೆಯಾಗುತ್ತದೆ ಎಂದರು.

ಕಾನೂನು ಪಾಲಿಸದವರು ಸಮಾಜದಿಂದ ದೂರ ಮಾಡಿ ಜೈಲಿಗೆ ಕಳಿಸಲಾಗುತ್ತದೆ. ನಿಯಂತ್ರಣ ಕಳೆದುಕೊಂಡು ಕಾನೂನಿಗೆ ವಿರುದ್ಧವಾಗಿ ವರ್ತಿಸಿದಾಗ ಜೈಲು ಕಾಣುತ್ತೀರಿ. ಇದಕ್ಕಾಗಿ ಕಾನೂನಿನ ಪರವಾಗಿ ನಿಮ್ಮ ನಡೆ ಇರಲಿ. ಏಕೆಂದರೆ ಅಪರಾಧ- ಅಪರಾಧಿ ನಡುವಿನ ಸಂಬಂಧ ವಿಷವರ್ತುಲ. ಇಂಥ ವಿಷವರ್ತುಲದಿಂದ ಹೊರಬರಲು ಸಾಹಿತ್ಯದ ಓದು ನೆರವಾಗುತ್ತದೆ ಎಂದು ತಿಳಿವಳಿಕೆ ಹೇಳಿದರು.

ಸಾಹಿತ್ಯಕ್ಕೆ ಕೆಡುಕನ್ನು ಆಚೆಗೆ ನೂಕಿ ಒಳ್ಳೆಯದನ್ನು ಮಾಡುವ ಶಕ್ತಿಯಿದೆ ಜೊತೆಗೆ ಸಮಾಜದ ವಿರುದ್ಧ ಹೋಗದಂತೆ ತಡೆಯುವ ಶಕ್ತಿಯಿದೆ. ಹಾಗೆಯೇ ಅಪರಾಧ ಪ್ರಜ್ಞೆಯಿಂದ ಹೊರಬರಲು ಸಾಹಿತ್ಯ ನೆರವಾಗುತ್ತದೆ. ಇದಕ್ಕಾಗಿ ಪುಸ್ತಕಗಳನ್ನು ಓದಿರಿ ಎಂದರು.

ಹಾವೇರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಂಶುಕುಮಾರ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಲ್.ವೈ.ಶಿರಕೋಳ, ಹಾವೇರಿ ವಿಶ್ವವಿದ್ಯಾಲಯ ಕುಲಪತಿ ಡಾ.ಸುರೇಶ ಜಂಗಮಶೆಟ್ಟಿ, ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಕುಲಸಚಿವ ಡಾ.ಸಿ.ಟಿ.ಗುರುಪ್ರಸಾದ್ ಹಾಗೂ ಹಾವೇರಿ ಜೈಲಿನ ಸಹಾಯಕ ಅಧೀಕ್ಷಕ ಖಿಲಾರಿ ಹಾಜರಿದ್ದರು.

ಸಾಹಿತ್ಯ ಕಮ್ಮಟದ ಸಂಚಾಲಕ ಗಣೇಶ ಅಮೀನಗಡ ಪ್ರಾಸ್ತಾವಿಕವಾಗಿ ಮಾತನಾಡಿದರು. ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯ ಸಂಚಾಲಕ ಡಾ.ಮಲ್ಲಿಕಾರ್ಜುನ ಬಿ.ಮಾನ್ವಡೆ ಸ್ವಾಗತಿಸಿ,ಕಾರ್ಯಕ್ರಮ ನಿರ್ವಹಿಸಿದರು.

ಮತ್ಸ್ಯಾಶ್ರಯ ಯೋಜನೆ: ನಿರ್ವಸತಿ ಮೀನುಗಾರರಿಂದ ಅರ್ಜಿ ಆಹ್ವಾನ

ಕೊಪ್ಪಳ : ಕೊಪ್ಪಳ ಮೀನುಗಾರಿಕೆ ಇಲಾಖೆಯಿಂದ 2024-25ನೇ ಸಾಲಿನ ಮತ್ಸ್ಯಾಶ್ರಯ ಯೋಜನೆಯಡಿ ನಿರ್ವಸತಿ ಮೀನುಗಾರರಿಗೆ ಮನೆ ನಿರ್ಮಾಣಕ್ಕೆ ಸಹಾಯಧನ ನೀಡಲಾಗುತ್ತಿದ್ದು, ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಯೋಜನೆಯಡಿ ಕೊಪ್ಪಳ ವಿಧಾನಸಭಾ ಕ್ಷೇತ್ರಕ್ಕೆ ಸಾಮಾನ್ಯ ವರ್ಗ-19, ಪರಿಶಿಷ್ಟ ಜಾತಿ-4, ಪರಿಶಿಷ್ಟ ಪಂಗಡ-2 ಸೇರಿದಂತೆ ಒಟ್ಟು 25 ಮನೆಗಳು ಹಾಗೂ ಯಲಬುರ್ಗಾ ವಿಧಾನಸಭಾ ಕ್ಷೇತ್ರಕ್ಕೆ ಸಾಮಾನ್ಯ ವರ್ಗ-19, ಪರಿಶಿಷ್ಟ ಜಾತಿ-4, ಪರಿಶಿಷ್ಟ ಪಂಗಡ-2 ಸೇರಿದಂತೆ ಒಟ್ಟು 25 ಮನೆಗಳು ಹಂಚಿಕೆಯಾಗಿದ್ದು, ಕೊಪ್ಪಳ ಮತ್ತು ಯಲಬುರ್ಗಾ ತಾಲೂಕಿನ ಮೀನುಗಾರರ ಸಹಕಾರ ಸಂಘಗಳ ಸದಸ್ಯರಿಗೆ ಮೊದಲ ಆದ್ಯತೆ ನೀಡಲಾಗುತ್ತದೆ.

ನಿರ್ವಸತಿ ಮೀನುಗಾರರು ಜೂನ್ 30 ರೊಳಗಾಗಿ ಕೊಪ್ಪಳ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಛೇರಿ ವೇಳೆಯಲ್ಲಿ ಅರ್ಜಿಗಳನ್ನು ಪಡೆದು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಸಹಾಯಕ ನಿರ್ದೇಶಕರು: 9148289737 ಗೆ ಸಂಪರ್ಕಿಸುವಂತೆ ಇಲಾಖೆಯ ಪ್ರಕಟಣೆಯ ತಿಳಿಸಿದೆ.

ಹಿಂದಿ ಅನುವಾದಕರ ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನ

ಹಾವೇರಿ: : ಬೆಂಗಳೂರು ಭಾರತೀ ಸರ್ಕಾರದ ಸಿಬ್ಬಂದಿ ನೇಮಕಾತಿ ಆಯೋಗ(ಕರ್ನಾಟಕ, ಕೇರಳ ಪ್ರದೇಶ)ದಲ್ಲಿ ಖಾಲಿ ಇರುವ ಹಿಂದಿ ಅನುವಾದಕರ ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನಿಸ ಲಾಗಿದೆ.

ದಿನಾಂಕ 01-08-2025 ರಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ 18ರಿಂದ 30 ವರ್ಷದೊಳಗಿರಬೇಕು. ಇತರೆ ವರ್ಗದವರಿಗೆ ಸಡಲಿಕೆ ಇದೆ. ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಸ್ನಾತಕೋತ್ತರ ಪದವಿ ಉತ್ತೀರ್ಣರಾಗಿರಬೇಕು. ಆಸಕ್ತ ಅಭ್ಯರ್ಥಿಗಳು ಅಗತ್ಯ ದಾಖಲೆಗಳೊಂದಿಗೆ ದಿನಾಂಕ 26-06-2025 ರೊಳಗಾಗಿ ವೆಬ್ ಸೈಟ್ **https://ssc.nic.in** ನಲ್ಲಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಖಖಅ ಮುಖ್ಯ ಕಚೇರಿ ನವದೆಹಲಿಯ ವೆಬ್ಸೈಟ್ **https://ssc.nic.in** ಮತ್ತು ಕರ್ನಾಟಕ-ಕೇರಳದ ಜಾಲತಾಣ **www.ssckkr.kar.nic.in** ಅಥವಾ ದೂರವಾಣಿ ಸಂಖ್ಯೆ 080-25502520, 08375-249291ನ್ನು ಸಂಪರ್ಕಿಸಬಹುದಾಗಿದೆ.

ಇಂದು ವಿವಿಧ ಜಯಂತಿಗಳ ಪೂರ್ವಭಾವಿ ಸಭೆ

ಹಾವೇರಿ: : ಜಿಲ್ಲಾಡಳಿತದಿಂದ ನಾಡಪ್ರಭು ಶ್ರೀ ಕೆಂಪೇಗೌಡ ಹಾಗೂ ಡಾ.ಪ.ಗು.ಹಳಕಟ್ಟಿ ಅವರ ಜನ್ಮದಿನ-ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ಆಚರಣೆ ಕುರಿತು ಪೂರ್ವಭಾವಿ ಸಭೆ ಜೂನ್ 21 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕೋರ್ಟ್ಹಾಲ್ನಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಆಯೋಜಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜೂನ್ 21 ರಂದು ಅಂಚೆ ಕಚೇರಿಗಳಲ್ಲಿ ವಹಿವಾಟು ಇರುವುದಿಲ್ಲ

ಹಾವೇರಿ: ಹಾವೇರಿ ಅಂಚೆ ವಿಭಾಗದ ವ್ಯಾಪ್ತಿಯಲ್ಲಿ ಬರುವ ಪ್ರಧಾನ ಅಂಚೆ ಕಚೇರಿ, ಉಪ ಹಾಗೂ ಶಾಖಾ ಅಂಚೆ ಕಚೇರಿಗಳಲ್ಲಿ ಇದೇ ಜೂನ್ 23 ರಂದು ಹೊಸ ತಂತ್ರಾಂಶ **APT IT** 2.0 ಅಳವಡಿಕೆ ಜಾರಿಯಾಗುತ್ತಿರುವ ಹಿನ್ನಲೆಯಲ್ಲಿ, ಪೂರ್ವ ತಯಾರಿಯಾಗಿ ಜೂನ್ 21 ರಂದು ಶನಿವಾರ ಹಾವೇರಿ ಪ್ರಧಾನ ಅಂಚೆ ಕಚೇರಿಯ ವ್ಯಾಪ್ತಿಯಲ್ಲಿ ಬರುವ ಎಲ್ಲ ಅಂಚೆ ಕಚೇರಿಗಳಲ್ಲಿ ಎಲ್ಲ ರೀತಿಯ ವಹಿವಾಟುಗಳು ಸ್ಥಗಿತಗೊಳ್ಳಲಿವೆ.

ದಿನಾಂಕ 23-06-2025 ರಿಂದ ಹೊಸ ಂಕಖಿ ಖಖಿ 2.0 ತಂತ್ರಾಂಶದಲ್ಲಿ ಎಂದಿನಂತೆ ಕಾರ್ಯನಿರ್ವಹಿಸಲಿವೆ. ಗ್ರಾಹಕರು ಸಹಕರಿಸಬೇಕು ಎಂದು ಹಾವೇರಿ ವಿಭಾಗದ ಅಂಚೆ ಅಧೀಕ್ಷಕ ಮಂಜುನಾಥ ಹುಬ್ಬಳ್ಳಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿಶ್ವ ರಕ್ತದಾನಿಗಳ ದಿನಾಚರಣೆ-ರಕ್ತದಾನ ಶಿಬಿರ ದಾನಗಳಲ್ಲಿ ರಕ್ತದಾನ ಶ್ರೇಷ್ಠದಾನ- ಡಾ.ಸರಿತಾ

ಹಾವೇರಿ: ದಾನಗಳಲ್ಲಿ ರಕ್ತದಾನ ಶ್ರೇಷ್ಠವಾಗಿದ್ದು, ರಕ್ತದಾನದಿಂದ ಒಬ್ಬರ ಜೀವ ಉಳಿಸಬಹುದು. ಹಾಗಾಗಿ ರಕ್ತದಾನದ ಮಹತ್ವದ ಕುರಿತು ಅರಿವು ಮೂಡಿಸುವುದು ಅಗತ್ಯವಾಗಿದೆ ಎಂದು ಜಿಲ್ಲಾ ರೋಗವಾಹಕ ರೋಗಗಳ ನಿಯಂತ್ರಣಾಧಿಕಾರಿ ಡಾ.ಸರಿತಾ ಅವರು ಹೇಳಿದರು.

ನಗರದ ಶ್ರೀ ಭಗತ್ಸಿಂಗ್ ಪದವಿ ಪೂರ್ವ ಮತ್ತು ಪದವಿ ಮಹಾವಿದ್ಯಾಲಯದಲ್ಲಿ ಗುರುವಾರ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣಘಟಕ, ಭಾರತೀಯ ರೆಡ್ಕ್ರಾಸ್ ಸಂಸ್ಥೆ ಹಾಗೂ ಜೆಸಿಐ ಸಹಯೋಗದಲ್ಲಿ ಆಯೋಜಿಸಲಾದ ವಿಶ್ವ ರಕ್ತದಾನಿಗಳ ದಿನಾಚರಣೆ ಹಾಗೂ ರಕ್ತದಾನ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಶಸ್ತ್ರ ಚಿಕಿತ್ಸೆ, ಅಪಘಾತ ಸಂಭವಿಸಿದಾಗ ಹಾಗೂ ರಕ್ತಹೀನತೆ ಉಳ್ಳವರಿಗೆ ರಕ್ತದ ಅವಶ್ಯಕತೆ ಹೆಚ್ಚಾಗಿರುತ್ತದೆ. ರಕ್ತವನ್ನು ಕೃತಜ್ಞವಾಗಿ ಉತ್ಪಾದಿಸಲು ಸಾಧ್ಯವಿಲ್ಲ. ಹಾಗಾಗಿ 18 ವರ್ಷ ಪೂರೈಸಿದ ಆರೋಗ್ಯವಂತ ಯುವಕ ಮತ್ತು ಯುವತಿಯರು ರಕ್ತದಾನ ಮಾಡಬಹುದು. ಪದವಿ ಕಾಲೇಜುಗಳು, ಸಂಘ-ಸಂಸ್ಥೆಗಳು, ಸಮಾಜ ಸೇವಕರು ರಕ್ತದಾನ ಶಿಬಿರಗಳನ್ನು ಆಯೋಜಿಸುವ ಮೂಲಕ ರಕ್ತದ ಕೊರತೆ ನೀಗಿಸಲು ಕೈಜೋಡಿಸಬೇಕು ಎಂದು ಸಲಹೆ ನೀಡಿದರು. ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ. ನೀಲೇಶ ಎಮ್.ಎನ್ ಅವರು ರಕ್ತದಾನ ಮಹತ್ವ, ರಕ್ತದಾನ ಶಿಬಿರಗಳ ಆಯೋಜನೆ ಹಾಗೂ ರಕ್ತದಾನ ರಕ್ತದಾನಿಗಳ ದಿನಾಚರಣೆ ಕುರಿತು ಮಾಹಿತಿ ನೀಡಿದರು ಹಾಗೂ ಜಿಲ್ಲೆಯಲ್ಲಿ ರಕ್ತದ ಕೊರತೆಯಾಗದಂತೆ ಎಲ್ಲರೂ ಸಮನ್ವಯದಿಂದ ಕೆಲಸಮಾಡೋಣ ಎಂದು ಹೇಳಿದರು. ಜಿಲ್ಲಾ ರಕ್ತನಿಧಿ ಕೇಂದ್

ಯೋಗ ದಿನಾಚರಣೆ ಪ್ರಯುಕ್ತ ಜಾಗೃತಿ ಜಾಥಾ

ಬೆಳಗಾವಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಆಯುಷ್ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಆರೋಗ್ಯ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಯುವ ಸಬಲೀಕರಣ ಕ್ರೀಡಾ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಸ್ಕೌಟ್ಸ್ ಮತ್ತು ಗೈಡ್ಸ್, ಭಾರತ ಸೇವಾ ದಳ, ನೆಹರು ಯುವ ಕೇಂದ್ರ ಬೆಳಗಾವಿ ಹಾಗೂ ಯೋಗ ಸಂಘ ಸಂಸ್ಥೆಗಳು ಮತ್ತು ವಿವಿಧ ಇಲಾಖೆಗಳ ಸಹಯೋಗದೊಂದಿಗೆ 11 ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಪ್ರಯುಕ್ತ ಶುಕ್ರವಾರ (ಜೂ.20) ಬೆಳಿಗ್ಗೆ 8.30 ಗಂಟೆಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯ ಆವರಣದಿಂದ "ಯೋಗ ನಡಿಗೆ" ಜಾಗೃತಿ ಜಾಥಾ ಜರುಗಿತು.

11 ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಪ್ರಯುಕ್ತ "ಯೋಗ ನಡಿಗೆ" ಜಾಗೃತಿ ಜಾಥಾಗೆ ಅಪರ ಜಿಲ್ಲಾಧಿಕಾರಿಗಳಾದ ವಿಜಯಕುಮಾರ ಹೊನಕೇರಿ ಅವರು ಚಾಲನೆ ನೀಡಿದರು.

ಜಾಗೃತಿ ಜಾಥಾದಲ್ಲಿ ಯೋಗದ ನಡೆ ಆರೋಗ್ಯದ ಕಡೆ, ಯೋಗದಿಂದ ದೇಹ, ಮನಸ್ಸು ಮತ್ತು ಆತ್ಮಕ್ಕೆ ಆರಾಮ, ಬದುಕಿಗೆ ಬೇಕು ಯೋಗ ಒಡುವುದು ರೋಗ, ಬದುಕಿಗೆ ಬೇಕು ಯೋಗ ಸ್ಥಿರವಾಗಿರುವುದು ಆರೋಗ್ಯ, ಯೋಗವು ಯಾವುದೇ ಖರ್ಚಿಲ್ಲದೆ ನಿಮಗೆ ಉತ್ತಮ ಆರೋಗ್ಯ ನೀಡುತ್ತದೆ ಎಂಬ ಘೋಷಣೆಗಳೊಂದಿಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯ ಆವರಣದಿಂದ ನಗರದ ಪ್ರಮುಖ ವೃತ್ತಗಳಲ್ಲಿ ಸಂಚರಿಸಿತು.

ಜಾಗೃತಿ ಜಾಥಾದಲ್ಲಿ ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ರವಿ ಬಂಗಾರೆಪ್ಪನವರ, ಜಿಲ್ಲಾ ಆಯುಸ್ ಅಧಿಕಾರಿ ಶ್ರೀಕಾಂತ ಸುನದೋಳಿ, ವಿವಿಧ ಶಾಲಾ-ಕಾಲೇಜಿನ ವಿದ್ಯಾರ್ಥಿಗಳು, ಶಿಕ್ಷಕರು, ಯೋಗ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಪಾಲ್ಗೊಂಡಿದ್ದರು.

***

ಇಂದು ಗ್ರಾಹಕರ ಸಂವಾದ ಸಭೆ

ಹಾವೇರಿ: : ಗ್ರಾಹಕರ ಸಂವಾದ ಸಭೆ ಜೂನ್ 21 ರಂದು ಶನಿವಾರ ಬೆಳಿಗ್ಗೆ 10 ರಿಂದ ಮಧ್ಯಾಹ್ನ 1-30 ರವರೆಗೆ ಹಾವೇರಿಯ ಹೆಸ್ಕಾಂ ಕಾರ್ಯ ಮತ್ತು ಪಾಲನಾ ಉಪ ವಿಭಾಗದ ಕಚೇರಿಯಲ್ಲಿ ಜರುಗಲಿದೆ. ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಈ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೆಸ್ಕಾಂ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದೇವಸ್ಥಾನ ವ್ಯವಸ್ಥಾಪನ ಸಮಿತಿ ರಚನೆಗೆ ಅರ್ಜಿ ಆಹ್ವಾನ

ಹಾವೇರಿ: : ಧಾರ್ಮಿಕ ದತ್ತಿ ಇಲಾಖೆಯ ಆಡಳಿತಕ್ಕೆ ಒಳಪಟ್ಟ ಸಿ ಪ್ರವರ್ಗದ ರಾಣೇಬೆನ್ನೂರು ತಾಲೂಕು ಗುಡಿಹೊನ್ನತ್ತಿ ಗ್ರಾಮದ ಶ್ರೀ ಹೊನ್ನಮ್ಮದೇವಿ ದೇವಸ್ಥಾನಕ್ಕೆ ಒಂಭತ್ತು ಸದಸ್ಯರಿರುವ ವ್ಯವಸ್ಥಾಪನ ಸಮಿತಿ ರಚನೆಗೆ ಅರ್ಜಿ ಆಹ್ವಾನಿಸಲಾಗಿದೆ.

ದೇವಸ್ಥಾನದ ಸಂಬಂಧದಲ್ಲಿ ಪ್ರಧಾನ ಅರ್ಚಕ ಅಥವಾ ಅರ್ಚಕ ಒಂದು, ಅನುಸೂಚಿತ ಜಾತಿ, ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ಕನಿಷ್ಠ ಒಬ್ಬ ಸದಸ್ಯ, ಇಬ್ಬರು ಮಹಿಳೆಯರು, ದೇವಸ್ಥಾನ/ಸಂಸ್ಥೆ ಇರುವ ಪ್ರದೇಶದ ಸ್ಥಳೀಕರಲ್ಲಿ ಕನಿಷ್ಠ ಒಬ್ಬರು ಹಾಗೂ ಇತರೆ ನಾಲ್ಕು ಜನರನ್ನೊಳಗೊಂಡ ಸಮಿತಿ ರಚನೆ ಮಾಡಲಾಗುವುದು.

ಅಭ್ಯರ್ಥಿಗಳು ದೇವರಲ್ಲಿ ನಂಬಿಕೆಯುಳ್ಳವರಾಗಿರಬೇಕು, 25 ವರ್ಷ ಮೇಲ್ಪಟ್ಟವರಾಗಿರಬೇಕು. ಒಳ್ಳೆಯ ನಡತೆ ಮತ್ತು ಖ್ಯಾತಿಯನ್ನು ಹೊಂದಿರಬೇಕು ಹಾಗೂ ಆ ಸ್ಥಳೀಯವಾಗಿ ಗೌರವವುಳ್ಳ ನಾಗರಿಕರಾಗಿರಬೇಕು.

ಆಸಕ್ತರು ಪೊಲೀಸ್ ಸತ್ಯಾಪನಾ ವರದಿ, ಪೂರ್ಣ ವಿಳಾಸ, ದೂರವಾಣಿ ಸಂಖ್ಯೆ ಸೇರಿದಂತೆ ಅಗತ್ಯ ಮಾಹಿತಿಯನ್ನು ಸ್ಪಷ್ಟವಾಗಿ ನಮೂದಿಸಿದ ಅರ್ಜಿಯನ್ನು ಈ ಪ್ರಕಟಣೆಯ 30 ದಿನದೊಳಗಾಗಿ ಹಾವೇರಿ ಜಿಲ್ಲಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು. ನಂತರ ಸಲ್ಲಿಸಲಾದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಧಾಮಿರ್ಕ ಪರಿಷತ್ ಅಧ್ಯಕ್ಷ ಡಾ.ವಿಜಯಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ.

ನಾಡಪ್ರಭು ಶ್ರೀ. ಕೆಂಪೇಗೌಡ ಜಯಂತಿ ಪೂರ್ವ ಸಿದ್ಧತಾ ಸಭೆ

ಅರ್ಥಪೂರ್ಣ ಆಚರಣೆಗೆ ಅಪರ ಜಿಲ್ಲಾಧಿಕಾರಿ ವಿಜಯ ಹೊನಕೇರಿ ಸೂಚನೆ



ಬೆಳಗಾವಿ, ಸರ್ಕಾರದ ನಿರ್ದೇಶನದಂತೆ ಜೂನ್.27 ರಂದು ನಾಡಪ್ರಭು ಶ್ರೀ. ಕೆಂಪೇಗೌಡ ಜಯಂತಿಯನ್ನು ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ಅರ್ಥಪೂರ್ಣವಾಗಿ ಆಚರಿಸಲು ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ ಅವರು ತಿಳಿಸಿದರು.

ಅಪರ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶುಕ್ರವಾರ (ಜೂನ್.20) ನಡೆದ ನಾಡಪ್ರಭು ಶ್ರೀ.ಕೆಂಪೇಗೌಡ ಜಯಂತಿ ಆಚರಣೆಯ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಾಡಪ್ರಭು ಶ್ರೀ. ಕೆಂಪೇಗೌಡ ಜಯಂತಿಯನ್ನು ಜೂನ.27 ರಂದು ಬೆಳಿಗ್ಗೆ 10 ಗಂಟೆಗೆ ಕುಮಾರ ಗಂಧರ್ವ ಕಲಾಮಂದಿರದಲ್ಲಿ ಆಯೋಜಿಸಲು ತಿಳಿಸಿದರು. ಕಾರ್ಯಕ್ರಮದ ಕುರಿತು ಮುದ್ರಿಸಲಾಗುವ ಆಮಂತ್ರಣ ಪತ್ರಿಕೆಗಳನ್ನು ಶಿಷ್ಟಾಚಾರದನ್ವಯ ಮುದ್ರಿಸಿ ಗಣ್ಯ ಮಾನ್ಯರನ್ನು ಸಮಾರಂಭಕ್ಕೆ ಸಾಕಷ್ಟು ಮುಂಚಿತವಾಗಿ ಆಹ್ವಾನಿಸಬೇಕು. ಕಾರ್ಯಕ್ರಮದಲ್ಲಿ ನಾಡಪ್ರಭು ಶ್ರೀ. ಕೆಂಪೆಗೌಡರ ಜೀವನ ಸಾಧನೆಗಳ ಬಗ್ಗೆ ತಿಳಿಸುವಂತಹ ನುರಿತ ಸಂಪನ್ಮೂಲ ವ್ಯಕ್ತಿಯನ್ನು ಆಹ್ವಾನಿಸುವಂತೆ ತಿಳಿಸಿದರು. ನಾಡಪ್ರಭು ಶ್ರೀ. ಕೆಂಪೆಗೌಡರ ಕುರಿತು ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ರಸಪ್ರಶ್ನೆ, ಪ್ರಬಂಧ ಸ್ಪರ್ಧೆ, ಆಶುಭಾಷಣ, ಕವನ ವಾಚನ, ಗಾಯನ ಹಾಗೂ ಚಿತ್ರಕಲಾ ಸ್ಪರ್ಧೆಗಳನ್ನು ಆಯೋಜಿಸುವಂತೆ ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೆರಿ ಅವರು ಸೂಚಿಸಿದರು.

ಸಭೆಯಲ್ಲಿ ಮಹಾನಗರ ಪಾಲಿಕೆ ಉಪ ಆಯುಕ್ತ ಉದಯಕುಮಾರ ತಳವಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ, ವಿವಿಧ ಇಲಾಖೆ ಅಧಿಕಾರಿಗಳು ಸೇರಿದಂತೆ ಸಮಾಜದ ಗಣ್ಯರು, ಮುಖಂಡರುಗಳು ಉಪಸ್ಥಿತರಿದ್ದರು.

ರಾಂಪುರ ಲಕ್ಕವ್ವ ದೇವಿ ಜಾತ್ರೆ ಸಂಪನ್ನ



ರಬಕವಿ-ಬನಹಟ್ಟಿ,ಜೂ20: ರಬಕವಿ-ಬನಹಟ್ಟಿ ನಗರಸಭೆ ವ್ಯಾಪ್ತಿಯ ರಾಂಪುರ ನಗರದ ಲಕ್ಕವ್ವ ದೇವಿ ಉಡಿ ತುಂಬುವ ಜಾತ್ರೆಯ ಕಾರ್ಯಕ್ರಮ ಶುಕ್ರವಾರ ಅದ್ದೂರಿಯಾಗಿ ಜರುಗಿತು.

ಗುರುವಾರ ರಾತ್ರಿಯಿಂದ ಶುಕ್ರವಾರ ಬೆಳಿಗಿನವರೆಗೂ ಅನೇಕ ಭಕ್ತರು ದೀಡ ನಮಸ್ಕಾರ ಹಾಕಿ ತಮ್ಮ ಇಷ್ಟಾರ್ಥಗಳನ್ನು ಇಡೇರಿಸುವಂತೆ ಹರಕೆ ತೀರಿಸಿದರು. ಬೆಳಗಿನ 5 ಕ್ಕೆ ಲಕ್ಕವ್ವ ದೇವಿಗೆ ವಿಶೇಷ ಅಭಿಷೇಕ ಹಾಗೂ ವಿವಿಧ ಬಣ್ಣಗಳ ಸೀರೆ ಕುಪ್ಪಸ ತೊಡಿಸಿ ಪೂಜೆ ಸಲ್ಲಿಸಲಾಯಿತು.

ಬೆಳಿಗ್ಗೆ 6ಕ್ಕೆ ನಗರದ ಅನೇಕ ಯುವಕ ಯವತಿಯರು ಗ್ರಾಮಸ್ಥರು ತಮ್ಮ ತಮ್ಮ ಇಷ್ಟಾರ್ಥಗಳು ಇಡೇರಿಸುವಂತೆ ವಾಡಿಕೆಯಂತೆ ಸಮೀಪದ ಕೃಷ್ಣಾ ನದಿಗೆ ನೂರಾರು ಸಂಖ್ಯೆಯಲ್ಲಿ ತೆರಳಿ ಮೀಸಲು ನೀರು ತಂದು ದೇವಿಗೆ ಅರ್ಪಿಸುವುದು ಹಲವು ವರ್ಷಗಳಿಂದ ಸಂಪ್ರದಾಯವಾಗಿದೆ. ನಂತರ ಗ್ರಾಮದ ಸುಮಂಗಲೆಯರು ಸೇರಿಸಂತೆ ಸರ್ವರು ದೇವಿಗೆ ಸೀರೆ ಕುಪ್ಪಸ ಸೇರಿದಂತೆ ಅನೇಕ ಉಡಿ ತುಂಬುವ ಸಾಮಗ್ರಿಗಳನ್ನು ಅರ್ಪಿಸಿ ನಗರದ ಜನರಿಗೆ ಚಿಕ್ಕಮಕ್ಕಳಿಗೆ ಯಾವುದೇ ರೋಗ-ರುಜನೆಗಳು ಬಾರದಿರಲಿ ಎಂದು ಬೇಡಿಕೊಂಡು ಅರ್ಪಿಸುವುದು ಸಾಮಾನ್ಯವಾಗಿತ್ತು.

ಈ ಸಂದರ್ಭದಲ್ಲಿ ನಗರದ ಹಿರಿಯರಾದ ದೇವಿಯ ಪೂಜಾರಿ ಮೌನೇಶ ಬಡಿಗೇರ, ಪ್ರಕಾಶ ಸಿಂಘನ್, ಲಕ್ಷ್ಮಣ ತಳವಾರ, ಸುರೇಶ ಗೋಲಬಾವಿ, ಮಹಾದೇವ ತಳವಾರ, ಬಸಪ್ರಭು ಹಟ್ಟಿ, ಶಿವಪುತ್ರಪ್ಪ ಮುರಗುಂಡಿ, ಪರಪ್ಪ ಬಿಳ್ಳೂರ, ಸುನೀಲ ವಜ್ರಮಟ್ಟಿ, ಶಿವು ಗೌರಡ, ಈರಪ್ಪ ಗೌಡರ, ಶ್ರೀಶೈಲ ಆಲಗೂರ, ವಿಜಯ ಕಲಾಲ, ರವಿ ಕೋಳಿ ಸೇರಿದಂತೆ ಅನೇಕರಿದ್ದರು.

ಇಂದು ಮಹಿಳಾ ರತ್ನ ಹಾಗೂ ಆದರ್ಶ ದಂಪತಿ ಪ್ರಶಸ್ತಿ ಪ್ರದಾನ ಸಮಾರಂಭ

ಬೆಳಗಾವಿ : ಅಪ್ರತಿಮ ವಾಗ್ಮಿ, ಅಪೂರ್ವ ಮಹಿಳಾ ಸಾಧಕಿ ದಿ. ಪದ್ಮಾವತಿ ಷಣ್ಮುಖಿಪ್ಪ ಅಂಗಡಿ ಅವರ 64ನೆಯ ಸ್ಮರಣೆಯ ನಿಮಿತ್ಯ ಇಲ್ಲಿನ ಶಿವಬಸವ ನಗರದ ನಾಗನೂರು ರುದ್ರಾಕ್ಷಿ ಮಠದಲ್ಲಿ "ಮಹಿಳಾ ರತ್ನ ಹಾಗೂ ಆದರ್ಶ ದಂಪತಿ" ಪ್ರಶಸ್ತಿ ಪ್ರದಾನ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ನಾಗನೂರು ರುದ್ರಾಕ್ಷಿ ಮಠದ ಡಾ. ಅಲ್ಲಮಪ್ರಭು ಮಹಾಸ್ವಾಮಿಗಳು ತಿಳಿಸಿದ್ದಾರೆ. ಕಾರ್ಯಕ್ರಮದ ಸಾನಿಧ್ಯವನ್ನು ಗದುಗಿನ ಜಗದ್ಗುರು ತೋಂಟದಾರ್ಯ ಸಂಸ್ಥಾನ ಮಠದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ವಹಿಸಲಿದ್ದಾರೆ.

ಕನ್ನಡ ನಾಡು, ನುಡಿ, ಸಂಸ್ಕೃತಿ, ಸಾಹಿತ್ಯ ಹಾಗು ಸಂಗೀತ ಕ್ಷೇತ್ರದಲ್ಲಿ ಅಪ್ರತಿಮ ಸಾಧನೆ ಮಾಡಿರುವ ಮಹಿಳಾ ಸಾಧಕರಿಗೆ ನಾಗನೂರು ರುದ್ರಾಕ್ಷಿ ಮಠದ ವತಿಯಿಂದ "ಮಹಿಳಾ ರತ್ನ" ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದ್ದು ಈ ಬಾರಿಯ ಮಹಿಳಾ ರತ್ನ ಪ್ರಶಸ್ತಿ ಭಾರತೀಯ ಸಂಗೀತ ಕುರಿತು ಖಚಿತವಾಗಿ ಮಾತನಾಡಬಲ್ಲ ಕರ್ನಾಟಕದ ವಿರಳ ವಿದ್ವಾಂಸರಲ್ಲಿ ಒಬ್ಬರಾಗಿರುವ ಡಾ. ರೋಹಿಣಿ ಗಂಗಾದರಯ್ಯ ಅವರಿಗೆ ನೀಡಲಾಗುತ್ತಿದೆ. ಇದರ ಜೊತೆಗೆ ಪ್ರಸಕ್ತ ಸಾಲಿನಿಂದ ಶ್ರೀಮತಿ ಪದ್ಮಾವತಿ ಷಣ್ಮುಖಿಪ್ಪ ಅಂಗಡಿ ಹಾಗೂ ರಾವ್ ಬಹದ್ದೂರ್ ಷಣ್ಮುಖಿಪ್ಪ ಅಂಗಡಿ ಅವರ ನೆನಹಿನಲ್ಲಿ ಸಾಮಾಜಿಕ, ಸಾಂಸ್ಕೃತಿಕ, ಧಾರ್ಮಿಕ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವ ದಂಪತಿಗಳಿಗೆ ಆದರ್ಶ ದಂಪತಿ ಪ್ರಶಸ್ತಿ ಪುರಸ್ಕಾರ ನೀಡಿ ಗೌರವಿಸಲಾಗುತ್ತಿದೆ. ಈ ಬಾರಿಯ ಆದರ್ಶ ದಂಪತಿ ಪ್ರಶಸ್ತಿಗೆ ಕನ್ನಡದ ಹೆಸರಾಂತ ಕಲಾವಿದ ರಂಗಕರ್ಮಿ ಕನ್ನಡಪರ ಹೋರಾಟಗಾರ ಕೆ.ವಿ. ನಾಗರಾಜಮೂರ್ತಿ ಹಾಗೂ ಹೆಸರಾಂತ ಹಿರಿಯ ಪತ್ರಕರ್ತೆ ಪ್ರಿಯಾಂಕ ಮಾಸ ಪತ್ರಿಕೆಯ ಕಾರ್ಯನಿರ್ವಾಹಕ ಸಂಪಾದಕಿ ಎಸ್. ಜಿ. ತುಂಗರೇಣುಕಾ ದಂಪತಿ ಭಾಜನರಾಗಿದ್ದಾರೆ ಎಂದು ಶ್ರೀಗಳು ತಿಳಿಸಿದ್ದಾರೆ.

ದಾನಿಗೊಂಡ ಕಾಲೇಜಿನಲ್ಲಿ ಕಾನೂನು ಅರಿವು ಕಾರ್ಯಕ್ರಮ

ವಿದ್ಯಾರ್ಥಿ ಘಟದಲ್ಲಿಯೇ ಕನಿಷ್ಠ ಕಾನೂನು ಅರಿತುಕೊಳ್ಳಿ

ತೇರದಾಳ-ದೇಶದ ಸಂವಿಧಾನ ಕಾನೂನು ಬಹಳಷ್ಟು ಶ್ರೇಷ್ಠವಾಗಿವೆ.

ಆದ್ದರಿಂದ ವಿದ್ಯಾರ್ಥಿ ಘಟ್ಟದಲ್ಲಿಯೇ ವಿದ್ಯಾರ್ಥಿಗಳು ಕನಿಷ್ಠ ಕಾನೂನು ಅರಿತುಕೊಳ್ಳುವುದು ಮುಖ್ಯವಾಗಿದೆ ಎಂದು ಇಲ್ಲಿನ ದಾನಿಗೊಂಡ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಪಿ.ಬಿ. ಅಪರಾಜ ಹೇಳಿದರು.

ದಾನಿಗೊಂಡ ವಾಣಿಜ್ಯ ಹಾಗೂ ವಿಜ್ಞಾನ ಕಾಲೇಜಿನಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಹಾಗೂ ಪದವಿಪೂರ್ವ ಶಿಕ್ಷಣ ಇಲಾಖೆ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಕಾನೂನು ಅರಿವು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಕಾನೂನು ತಿಳಿದುಕೊಳ್ಳುವುದರ ಜತೆಗೆ ಪಾಲಿಸುವುದು ಗೌರವಿಸುವುದು ಕೂಡ ವಿದ್ಯಾರ್ಥಿಗಳು ರೂಢಿಸಿಕೊಳ್ಳಬೇಕು. ಕಾನೂನು ವಿರುದ್ಧವಾದ ಕೆಲಸಗಳನ್ನು ಪಾಲ್ಗೊಳ್ಳುವುದು ಮಾಡುವುದು ಅಪರಾಧ ಎಂದು ಹೇಳಿದರು. ನ್ಯಾಯವಾದಿ ವಿನೋದ ಪತ್ತಾರ ವ್ಯಸನಮುಕ್ತ ಸಮಾಜ, ಕಾನೂನಿನ ಸುರಕ್ಷತಾ ಕ್ರಮಗಳು ಸೇರಿದಂತೆ ಹಲವು ವಿಚಾರಗಳನ್ನು ವಿದ್ಯಾರ್ಥಿಗಳಿಗೆ ತಿಳಿ ಹೇಳಿದರು. ಪ್ರಾಚಾರ್ಯ ಪ್ರಕಾಶ ಮಾಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಬಿ.ಎಸ್. ನೇಗಿನಾಳ, ಭರತೇಶ ಘಟನಟ್ಟಿ ಇದ್ದರು.

ಕಾಳಿದಾಸ ಪ್ರೌಢಶಾಲೆಯಲ್ಲಿ ಮಲೇರಿಯಾ ವಿರೋಧಿ ಮಾಸಾಚರಣೆ ಕಾರ್ಯಕ್ರಮ

ಕೊಪ್ಪಳ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ, ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಜೂನ್ 18 ಕೊಪ್ಪಳ ನಗರದ ಕಾಳಿದಾಸ ಪ್ರೌಢಶಾಲೆಯಲ್ಲಿ ಮಲೇರಿಯಾ ವಿರೋಧಿ ಮಾಸಾಚರಣೆ ಅಂಗವಾಗಿ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶಿವಾನಂದ ವ್ಹಿ.ಪಿ ಅವರು ಮಾತನಾಡಿ, ಪ್ರತಿ ವರ್ಷ ಜೂನ್ ತಿಂಗಳಲ್ಲಿ ಮಲೇರಿಯಾ ವಿರೋಧಿ ಮಾಸಾಚರಣೆ ಕಾರ್ಯಕ್ರಮವನ್ನು ಆಚರಿಸಲಾಗುತ್ತದೆ. ಇದರ ಉದ್ದೇಶ ಜೂನ್ ತಿಂಗಳಲ್ಲಿ ಮಳೆಗಾಲ ಪ್ರಾರಂಭವಾಗುವುದರಿಂದ ನಿಂತ ನೀರಿನಲ್ಲಿ ಸೋಂಕಿತ ಸೊಳ್ಳೆಗಳು ಹೆಚ್ಚಾಗಿ ಮನುಷ್ಯರಿಗೆ ಒಬ್ಬರಿಂದ ಇನ್ನೊಬ್ಬರಿಗೆ ಕಚ್ಚುವುದರಿಂದ ಮಲೇರಿಯಾ ರೋಗ ಹರಡುತ್ತದೆ. ಇದರ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವ ಉದ್ದೇಶದಿಂದ ಈ ಜಾಗೃತಿ ಕಾರ್ಯಕ್ರಮ ಆಚರಿಸಲಾಗುತ್ತದೆ. ಸೋಂಕಿತ ಅನಾಫಿಲಿಸ್ ಹೆಣ್ಣು ಸೊಳ್ಳೆಗಳು ನೀರಿನಲ್ಲಿ ಮೊಟ್ಟೆಗಳನ್ನಿಟ್ಟು ಸಂತಾನಾಭಿವೃದ್ಧಿ ಮಾಡುತ್ತವೆ. ತಲೆನೋವು, ವಾಂತಿ, ವಿಪರೀತ ಚಳಿಜ್ವರ, ಮೈನಡುಕ ಲಕ್ಷಣಗಳಿದ್ದರೆ ತಕ್ಷಣ ತಮ್ಮ ಸಮೀಪದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಅಥವಾ ಆರೋಗ್ಯ ಸಿಬ್ಬಂದಿಗಳ ಜೊತೆ ರಕ್ತ ಪರೀಕ್ಷೆ ಮಾಡಿಸಿ, ಖಚಿತ ಪಟ್ಟರೆ ಉಚಿತ ಚಿಕಿತ್ಸೆ ನೀಡಲಾಗುತ್ತದೆ. ಯಾವುದೇ ಕಾರಣಕ್ಕೂ ಜ್ವರದ ಬಗ್ಗೆ ನರ್ಲಕ್ಷ ಮಾಡಬಾರದೆಂದು ತಿಳಿಸಿದರು.

ಮಲೇರಿಯಾ ನಮ್ಮೊಂದಿಗೆ ಕೊನೆಗೊಳ್ಳುತ್ತದೆ. ಮರುಹೂಡಿಕೆ, ಮರುಕಲ್ಪನೆ, ಮರುಉತ್ತೇಜನ ನೀಡೋಣ ಎಂಬ ಘೋಷ್ಯವಾಕ್ಯದೊಂದಿಗೆ ಈ ವರ್ಷ ಸಾರ್ವಜನಿಕರಿಗೆ ಅರಿವು ಮೂಡಿಸಲಾಗುತ್ತಿದೆ. ಇದರ ನಿಯಂತ್ರಣಕ್ಕಾಗಿ ತಮ್ಮ ಮನೆಯ ಸುತ್ತ-ಮುತ್ತ ನೀರು ನಿಲ್ಲದಂತೆ ಎಚ್ಚರಿಕೆ ವಹಿಸಬೇಕು. ಸಾಯಂಕಾಲದ ವೇಳೆ ಬೇವಿನ ಸೊಪ್ಪಿನ ಹೊಗೆ ಹಾಕಬೇಕು. ಸೊಳ್ಳೆ ಕಡಿತದಿಂದ ದೂರವಿರಲು ವೈಯಕ್ತಿಕ ರಕ್ಷಣೆ ಮಾಡಿಕೊಳ್ಳಬೇಕು. ಮಲೇರಿಯಾ ನಿಯಂತ್ರಣ ಪ್ರತಿಯೊಬ್ಬರ ಜವಾಬ್ದಾರಿ. ಮನೆಯಲ್ಲಿ ನೀರು ಶೇಖರಣಾ ತೊಟ್ಟಿಗಳಲ್ಲಿ ಸೊಳ್ಳೆಗಳು ಮೊಟ್ಟೆಗಳನ್ನಿಟ್ಟು ಸಂತಾನಾಭಿವೃದ್ಧಿ ಮಾಡುತ್ತವೆ. ಲಾರ್ವಾ ನಾಶಕ್ಕಾಗಿ ಸ್ವಚ್ಚಗೊಳಿಸತ್ತಿರಬೇಕು. ಆರೋಗ್ಯ ಇಲಾಖೆ ಸಿಬ್ಬಂದಿಗಳು ಮತ್ತು ಆಶಾ ಕಾರ್ಯಕರ್ತೆಯರು ಮನೆ ಭೇಟಿ ನೀಡಿದಾಗ ಸಹಕರಿಸಿ, ರಕ್ತಲೇಪನ ನೀಡಿ ಮಲೇರಿಯಾ ಮುಕ್ತ ಕೊಪ್ಪಳ ಜಿಲ್ಲೆಯನ್ನಾಗಿ ಮಾಡಲು ಕೈಜೋಡಿಸುವಂತೆ ಮನವಿ ಮಾಡಿದರು.

ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶ್ರೀಕಾಂತ ಹೆಚ್.ಹೆಚ್. ಮಾತನಾಡಿ, ಖಾಯಿಲೆಗಳ ನಿಯಂತ್ರಣ ಮತ್ತು ಅದರ ಮುಂಜಾಗ್ರತ ಕ್ರಮಗಳು, ಮಕ್ಕಳಲ್ಲಿ ಕಂಡುಬರುವ ಅತಿಸಾರಭೇದಿ ನಿಯಂತ್ರಣ, ಮುಂಜಾಗ್ರತ ಕ್ರಮಗಳ ಕುರಿತು ಮತ್ತು ಹದಿ-ಹರೆಯದವರ ಆರೋಗ್ಯ ರಕ್ಷಣೆ ಕುರಿತು ವಿವರವಾಗಿ ಮಾತನಾಡಿದರು.

ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ಲಿಂಕ್‌ವರ್